ಸಂಪುಟ: 06 ಸಂಚಿಕೆ: 106 ಪುಟಗಳು: 08 ಸೋಮವಾರ 29 ಜೂನ್ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಮುಂಜಾನೆ ಮಾತು
ಎಲ್ಲವನ್ನು ಮುತುವರ್ಜಿಯಿಂದ ನಿರ್ವಹಿಸುವ ಗೃಹಿಣಿ ಉಪ್ಪು ಇದ್ದಂತೆ. ಗೈರುಹಾಜರಿಯಲ್ಲೇ ಮಹತ್ವ ಗೊತ್ತಾಗೋದು. ಅವಳನ್ನು ಗೌರವಿಸೋಣ!

## ತೊಡೆ ತಟ್ಟೋದು, ಪ್ರಚೋದನೆ ಕೊಡೋದು ತಪ್ಪು: ಪ್ರಿಯಾಂಕ್ ಖರ್ಗೆ

• ಉದಯವಾಹಿನಿ,ಬೆಂಗಳೂರು

ತೊಡೆ ತಟ್ಟೋದು, ಪ್ರಚೋದನೆ ಕೊಡೋದು ತಪ್ಪು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಪ್ರತಿಕ್ರಿಯೆ ನೀಡಿದ್ದಾರೆ. ಜೊತೆಗೆ, ಶಾಸಕ ಪ್ರದೀಪ್ ಈಶ್ವರ್ ಮೇಲೆ ಚಪ್ಪಲಿ ಎಸೆದವರ ವಿರುದ್ಧ ಖರ್ಗೆ ಅಸಮಾಧಾನ ಹೊರಹಾಕಿದರು. ನಗರದಲ್ಲಿ ಮಾತನಾಡಿದ ಅವರು, ಜೆಡಿಎಸ್‌ನವರಿಗೆ ಅಸ್ತಿತ್ವದ ಪ್ರಶ್ನೆ ಇದೆ. ಅದಕ್ಕೇ ಹೀಗೆಲ್ಲ ನಮ್ಮ ಮೇಲೆ ಟೀಕೆ ಮಾಡ್ತಿದ್ದಾರೆ. ಇದು ಇಷ್ಟು ದಿನ ಇರಲಿಲ್ಲ. ಡಿಕೆಶಿ ಅವ್ರು ಸಿಎಂ ಆದ ನಂತರ ಹೀಗೆಲ್ಲ ಮಾಡ್ತಿದ್ದಾರೆ. ಚಪ್ಪಲಿಯಲ್ಲಿ ಒಬ್ಬ ಶಾಸಕನಿಗೆ ಹೊಡೆಯಲು ಹೋಗೋದು ತಪ್ಪು. ಯಾರೇ ಇರಲಿ ಪ್ರಚೋದನೆ ಕೊಡೋದು ತಪ್ಪೇ.

ಎಲ್ಲರೂ ಕಾನೂನು ಇತಿಮಿತಿಯಲ್ಲಿ ಇರಬೇಕು. ತೊಡೆ ತಟ್ಟೋದು, ಪ್ರಚೋದನೆ ಕೊಡೋದು ತಪ್ಪು. ಪ್ರದೀಪ್ ಈಶ್ವರ್ ವಿರುದ್ಧ ಜನರನ್ನು ಬಿಟ್ಟು ದಾಳಿ ಮಾಡಿಸೋ ಪ್ರಯತ್ನ ಸರಿನಾ ಎಂದು ಪ್ರಶ್ನಿಸಿದರು.

## ಬೆಂಗಳೂರಿನ ವೈಜ್ಞಾನಿಕ ನಗರ ಯೋಜನೆಗೆ ಸಮಾಧಿ ಶಿಲೆ ಹಾಕಿದ್ದೀರಿ ತೇಜಸ್ವಿ ಸೂರ್ಯ ಕಿಡಿ

• ಉದಯವಾಹಿನಿ, ಬೆಂಗಳೂರು

ನೀವು ಶಂಕುಸ್ಥಾಪನೆ ಮಾಡಿಲ್ಲ. ಬೆಂಗಳೂರಿನ ವೈಜ್ಞಾನಿಕ ನಗರ ಯೋಜನೆಗೆ ಸಮಾಧಿ ಶಿಲೆ ಹಾಕಿದ್ದೀರಿ ಎಂದು ಸಂಸದ ತೇಜಸ್ವಿ ಸೂರ್ಯ ಅವರು ಸಿಎಂ ಡಿಕೆ ಶಿವಕುಮಾರ್ ಅವರ ವಿರುದ್ಧ ಕಿಡಿಕಾರಿದ್ದಾರೆ. ಬೆಂಗಳೂರು ನಗರದ ಮೊದಲ ಟನಲ್ ರಸ್ತೆ ಕಾಮಗಾರಿಗೆ ಇಂದು ಸಿಎಂ ಡಿ.ಕೆ ಶಿವಕುಮಾರ್ ಅವರು ಗುದ್ದಲಿ ಪೂಜೆ ನೆರವೇರಿಸಿದರು. ಇದಕ್ಕೆ ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಂಚಿಕೊಳ್ಳುವ ಮೂಲಕ ಪ್ರತಿಕ್ರಿಯಿಸಿರುವ ಸಂಸದರು, ಯೋಜನೆಗೆ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ಮಾನ್ಯ ಮುಖ್ಯಮಂತ್ರಿಗಳೇ, ಇಂದು ನೀವು ಶಂಕುಸ್ಥಾಪನೆ ಮಾಡಿಲ್ಲ. ಬೆಂಗಳೂರಿನ ವೈಜ್ಞಾನಿಕ ನಗರ ಯೋಜನೆಗೆ ಸಮಾಧಿ ಶಿಲೆ ಹಾಕಿದ್ದೀರಿ. 1,139 ಕೋಟಿ ವೆಚ್ಚದ ಈ 2 ಕಿ.ಮೀ. ಸುರಂಗ ಮಾರ್ಗವು ಸಂಚಾರ ದಟ್ಟಣೆಗೆ ಯಾವುದೇ ಪರಿಹಾರವಲ್ಲ. ಸರ್ಕಾರದ ಸಲಹೆಗಾರರು ಸಿದ್ಧಪಡಿಸಿರುವ ಡಿಪಿಆರ್‌ನಲ್ಲೇ ಈ ಸುರಂಗ ಮಾರ್ಗವು ಉದ್ಘಾಟನೆಯ ಮೊದಲ ದಿನದಿಂದಲೇ ವಾಹನಗಳಿಂದ ತುಂಬಿ ತುಳುಕಲಿದೆ ಎಂದು ಹೇಳಲಾಗಿದೆ. 5 ವರ್ಷಗಳ ನಂತರವಲ್ಲ, 10 ವರ್ಷಗಳ ನಂತರವಲ್ಲ.

ಮೊದಲ ದಿನವೇ. ಹಾಗಿದ್ದರೆ, ಆರಂಭದ ದಿನದಿಂದಲೇ ಟ್ರಾಫಿಕ್ ಜಾಮ್ ಆಗಲಿದೆ ಎಂದು ಯೋಜನೆಯ ವರದಿಯೇ ಹೇಳುತ್ತಿರುವಾಗ, ಈ ಯೋಜನೆ ಯಾರಿಗಾಗಿ ಖಂಡಿತವಾಗಿಯೂ ಬೆಂಗಳೂರಿನ ಜನರಿಗಾಗಿ ಅಲ್ಲ. ಬೆಂಗಳೂರು ಜನರಲ್ಲಿರುವ ಅಭಿಪ್ರಾಯ ಸ್ಪಷ್ಟವಾಗಿದೆ. ಸದಾಶಿವನಗರದ ಕೆಲವು ಪ್ರಭಾವಿ ವಿಐಪಿಗಳು, ಮುಖ್ಯಮಂತ್ರಿಗಳು ಹಾಗೂ ವಿಮಾನ ನಿಲ್ದಾಣಕ್ಕೆ ಈ ಮಾರ್ಗ ಬಳಸುವ ನಗರದ ಶ್ರೀಮಂತ ವರ್ಗದ ಅನುಕೂಲಕ್ಕಾಗಿ ರೂಪಿಸಲಾಗಿದೆ ಎನ್ನುವ ಭಾವನೆ ಜನರಲ್ಲಿ ಮೂಡಿದೆ.

## ಮುಂದಿನ ಕೆಲ ದಿನ ರಾಜ್ಯದ ಹಲವೆಡೆ ಭಾರಿ ಮಳೆ ನಿರೀಕ್ಷೆ: ಕರಾವಳಿ ಜಿಲ್ಲೆಗಳಲ್ಲಿ ಯಲ್ಲೋ ಅಲರ್ಟ್

• ಉದಯವಾಹಿನಿ, ಬೆಂಗಳೂರು

ಕರಾವಳಿ ಜಿಲ್ಲೆಗಳು ಸೇರಿದಂತೆ ರಾಜ್ಯದ ವಿವಿಧೆಡೆ ಮುಂದಿನ ಕೆಲವು ದಿನಗಳ ಕಾಲ ವ್ಯಾಪಕವಾಗಿ ಮಳೆಯಾಗುವ ಸಾಧ್ಯತೆಯಿದೆ ಎಂದು ರಾಜ್ಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. **ಕರಾವಳಿ ಜಿಲ್ಲೆಗಳಲ್ಲಿ ಯಲ್ಲೋ ಅಲರ್ಟ್:** ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಬಿರುಗಾಳಿ ಸಹಿತ ಭಾರಿ ಮಳೆಯಾಗುವ ಸಾಧ್ಯತೆ ದಟ್ಟವಾಗಿರುವುದರಿಂದ ಯಲ್ಲೋ ಅಲರ್ಟ್ ಘೋಷಿಸಲಾಗಿದೆ. ಈ ಜಿಲ್ಲೆಗಳಲ್ಲಿ ಗಂಟೆಗೆ 30 ರಿಂದ 40 ಕಿಲೋಮೀಟರ್ ವೇಗದಲ್ಲಿ ನಿರಂತರ ಬಲವಾದ ಗಾಳಿ ಬೀಸುವ ಸಾಧ್ಯತೆಯಿದ್ದು, ಕೆಲ ಸ್ಥಳಗಳಲ್ಲಿ ಧಾರಾಕಾರ ಮಳೆಯಾಗುವ ಸಾಧ್ಯತೆಯಿದೆ. ಕರಾವಳಿ ತೀರದಲ್ಲಿ ವಾಸಿಸುವವರು ಹಾಗೂ ಮೀನುಗಾರರು ಜಾಗರೂಕರಾಗಿರುವಂತೆ ಹವಾಮಾನ ಇಲಾಖೆ ಸೂಚನೆ ನೀಡಿದೆ.

ದಕ್ಷಿಣ ಒಳನಾಡಿನ ಶಿವಮೊಗ್ಗ, ಚಿಕ್ಕಮಗಳೂರು, ಮೈಸೂರು, ಮಂಡ್ಯ, ಹಾಸನ, ಕೊಡಗು ಮತ್ತು ಚಾಮರಾಜನಗರ ಜಿಲ್ಲೆಗಳ ಅನೇಕ ಕಡೆಗಳಲ್ಲಿ ಸಾಧಾರಣ ಮಳೆಯಾಗಲಿದೆ. ಉತ್ತರ ಒಳನಾಡಿನ ಜಿಲ್ಲೆಗಳಾದ ಬೀದರ್, ಬಾಗಲಕೋಟೆ, ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಕಲಬುರಗಿ, ಕೊಪ್ಪಳ, ರಾಯಚೂರು, ಯಾದಗಿರಿ ಹಾಗೂ ವಿಜಯಪುರ ಜಿಲ್ಲೆಯ ಹಲವೆಡೆ ಗುಡುಗು ಸಹಿತ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಮತ್ತೊಂದೆಡೆ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ಬಳ್ಳಾರಿ, ದಾವಣಗೆರೆ, ಕೋಲಾರ, ರಾಮನಗರ, ತುಮಕೂರು ಮತ್ತು ವಿಜಯನಗರ ಜಿಲ್ಲೆಗಳ ಹಲವು ಸ್ಥಳಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗಬಹುದು ಎಂದು ಹವಾಮನ ಇಲಾಖೆ ಮುನ್ಸೂಚನೆ ನೀಡಿದೆ.

## ರಾಜ್ಯದ ರೈತರ ಆರ್ ಟಿಸಿಗಳಲ್ಲಿ ವಕ್ಫ್ ಉಲ್ಲೇಖ: ರಾಜ್ಯ ಸರ್ಕಾರದ ಮೇಲೆ ಮುಗಿಬಿದ್ದ ವಿಪಕ್ಷ ನಾಯಕ ಅಶೋಕ್

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ವಿವಿಧ ಭಾಗಗಳಲ್ಲಿ, ರೈತರು ಹಾಗೂ ಖಾಸಗಿ ವ್ಯಕ್ತಿಗಳ ಜಮೀನುಗಳ ದಾಖಲೆಗಳಲ್ಲಿ ಯಾವುದೇ ಪೂರ್ವಸೂಚನೆ ಇಲ್ಲದೆ ಇದ್ದಕ್ಕಿದ್ದಂತೆ ವಕ್ಫ್ ಹೆಸರು ನಮೂದಾಗಿರುವುದು ಈ ಹಿಂದೆ ಭಾರಿ ವಿವಾದಕ್ಕೆ ಕಾರಣವಾಗಿತ್ತು. ಅದೇ ವಿಚಾರವೀಗ ಮತ್ತೆ ಮುನ್ನೆಲೆಗೆ ಬಂದಿದೆ. ರಾಜ್ಯದ 1,80,000ಕ್ಕೂ ಹೆಚ್ಚು ರೈತರ ಗಳಲ್ಲಿ ಈಗಾಗಲೇ ವಕ್ಫ್ ಉಲ್ಲೇಖ ದಾಖಲಾಗಿದೆ ಎಂದು ಆರೋಪಿಸಿರುವ ವಿಪಕ್ಷ ನಾಯಕ ಆರ್. ಅಶೋಕ್, ರೈತರ ಭೂಮಿಯನ್ನು ವಕ್ಫ್ ವಿವಾದಕ್ಕೆ ಸಿಲುಕಿಸಿ, ಕಾಂಗ್ರೆಸ್ ಸರ್ಕಾರ ಯಾರ ಹಿತ ಕಾಯುತ್ತಿದೆ ಎಂದು ಪ್ರಶ್ನಿಸಿದ್ದಾರೆ.

ರಾಜ್ಯ ಸರ್ಕಾರದ ಓಲೈಕೆ ಮತ್ತು ತುಷ್ಟೀಕರಣದ ರಾಜಕಾರಣ ಈಗ ನಾಡಿನ ರೈತರ ಅಸ್ತಿತ್ವಕ್ಕೇ ಕುತ್ತು ತರುವ ಹಂತಕ್ಕೆ ತಲುಪಿದೆ.

# ನಮೋ ನವ ಹೆಜ್ಜೆ




## ಮೋದಿಗೆ ಸೀಶೆಲ್ಸ್ ಅತ್ಯುನ್ನತ ನಾಗರಿಕ ಪ್ರಶಸ್ತಿ

• ಉದಯವಾಹಿನಿ, ವಿಕ್ಟೋರಿಯಾ

**1** ಪ್ರಧಾನಿ ಮೋದಿಗೆ 34ನೇ ಜಾಗತಿಕ ಗೌರವ

**2** ಸೆಶೆಲ್ಸ್‌ನ ಗಾರ್ಡಿಯನ್ ಆಫ್ ದಿ ಬ್ಲೂ ಹಾರಿಜಾನ್ ಪ್ರಶಸ್ತಿ ಪ್ರದಾನ

**3** ದಿನಗಳ ಭೇಟಿಗೆ ಸೆಶೆಲ್ಸ್‌ಗೆ ತೆರಳಿರುವ ಮೋದಿ

ಭಾರತ ಮತ್ತು ಸೀಶೆಲ್ಸ್ ದ್ವೀಪ ರಾಷ್ಟ್ರದ ನಡುವಿನ ದ್ವಿಪಕ್ಷೀಯ ಬಾಂಧವ್ಯವನ್ನು ಅಭೂತಪೂರ್ವ ಎತ್ತರಕ್ಕೆ ಕೊಂಡೊಯ್ದಿದ್ದಕ್ಕಾಗಿ ಹಾಗೂ ಹಿಂದೂ ಮಹಾಸಾಗರ ವಲಯದ ಭದ್ರತೆ ಮತ್ತು ಸಮುದ್ರ ಆರ್ಥಿಕತೆಯ ಬೆಳವಣಿಗೆಗೆ ನೀಡಿದ ಅಪ್ರತಿಮ ಕೊಡುಗೆಗಾಗಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸೀಶೆಲ್ಸ್ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ ಗಾರ್ಡಿಯನ್ ಆಫ್ ದಿ ಬ್ಲೂ ಹೊರೈಜನ್ ಗೌರವವನ್ನು ನೀಡಿ ಪುರಸ್ಕರಿಸಿದೆ. ಸೀಶೆಲ್ಸ್ ಅಧ್ಯಕ್ಷರು ಪ್ರಧಾನಿ ಮೋದಿ ಅವರಿಗೆ ಈ ಅತ್ಯುನ್ನತ ನಾಗರಿಕ ಗೌರವವನ್ನು ನೀಡಿದರು. ಪ್ರಧಾನಿ ಮೋದಿ ಅವರಿಗೆ ವಿದೇಶಿ ಸರ್ಕಾರಗಳು ನೀಡುತ್ತಿರುವ ಅತ್ಯುನ್ನತ ಪ್ರಶಸ್ತಿಗಳ ಸರಣಿಗೆ ಇದು ಮತ್ತೊಂದು ಪ್ರಮುಖ ಸೇರ್ಪಡೆಯಾಗಿದೆ. ಹಿಂದೂ ಮಹಾಸಾಗರ ವಲಯದಲ್ಲಿ ಶಾಂತಿ, ಸ್ಥಿರತೆ ಮತ್ತು ಸುರಕ್ಷತೆಯನ್ನು ಕಾಪಾಡುವಲ್ಲಿ ಭಾರತವಹಿಸಿದ ನಾಯಕತ್ವದ ಪಾತ್ರವನ್ನು ಸೀಶೆಲ್ಸ್ ಶ್ಲಾಘಿಸಿದೆ. ಸಮುದ್ರ ಸಂಪನ್ಮೂಲಗಳ ಸುಸ್ಥಿರ ಬಳಕೆ ಮತ್ತು ಹವಾಮಾನ ವೈಪರೀತ್ಯದ ವಿರುದ್ಧ ದ್ವೀಪ ರಾಷ್ಟ್ರಗಳಿಗೆ ಭಾರತ ನೀಡಿದ ತಾಂತ್ರಿಕ ಹಾಗೂ ಆರ್ಥಿಕ ಬೆಂಬಲವನ್ನು ಗೌರವಿಸಿ ಈ ಪ್ರಶಸ್ತಿ ನೀಡಲಾಗಿದೆ. ಈ ಅತ್ಯುನ್ನತ ಗೌರವವನ್ನು ಸ್ವೀಕರಿಸಿದ ಪ್ರಧಾನಿ ನರೇಂದ್ರ ಮೋದಿ ಅವರು, ಈ ಪ್ರಶಸ್ತಿಯು ಕೇವಲ ನನಗಷ್ಟೇ ಸಂದ ಗೌರವವಲ್ಲ, ಇದು 140 ಕೋಟಿ ಭಾರತೀಯರಿಗೆ ಮತ್ತು ಭಾರತ-ಸೀಶೆಲ್ಸ್ ನಡುವಿನ ಸುದೀರ್ಘ ಸ್ನೇಹಕ್ಕೆ ಸಿಕ್ಕ ಮನ್ನಣೆಯಾಗಿದೆ. ಹಿಂದೂ ಮಹಾಸಾಗರದ ರಕ್ಷಣೆ ಮತ್ತು ಉಭಯ ದೇಶಗಳ ಪ್ರಗತಿಗೆ ಭಾರತ ಸದಾ ಬದ್ಧವಾಗಿದೆ ಎಂದು ಹೇಳಿದ್ದಾರೆ.

ವಸತಿ, ಸಾರಿಗೆ, ಕೌಶಲ್ಯ ಅಭಿವೃದ್ಧಿ, ಆಹಾರ ಭದ್ರತೆ, ಶಿಕ್ಷಣ ಮತ್ತು ರಕ್ಷಣೆ ಸೇರಿದಂತೆ ಸೀಶೆಲ್ಸ್‌ಗೆ 175 ಮಿಲಿಯನ್ ಡಾಲರ್ (1,460 ಕೋಟಿ ರೂ.) ವಿಶೇಷ ಆರ್ಥಿಕ ಪ್ಯಾಕೇಜ್ ಅನ್ನು ಪ್ರಧಾನಿ ಮೋದಿ ಘೋಷಿಸಿದರು. ಸೀಶೆಲ್ಸ್ ಅಧ್ಯಕ್ಷ ಡಾ. ಪ್ಯಾಟ್ರಿಕ್ ಹರ್ಮಿನಿ ಅವರೊಂದಿಗೆ ಮಾತನಾಡಿದ ಪ್ರಧಾನಿ, ಭಾರತದ ಅಭಿವೃದ್ಧಿ ಪಾಲುದಾರಿಕೆಯು ಅದರ ಪಾಲುದಾರ ರಾಷ್ಟ್ರಗಳ ಆದ್ಯತೆಗಳಿಂದ ನಡೆಸಲ್ಪಡುತ್ತದೆ. ಯುವ ಕೌಶಲ್ಯ ಮತ್ತು ಉದ್ಯೋಗಾವಕಾಶವನ್ನು ಬಲಪಡಿಸಲು ವೃತ್ತಿಪರ ಮತ್ತು ತಾಂತ್ರಿಕ ಕೇಂದ್ರವನ್ನು ಪ್ರಾರಂಭಿಸುವದಾಗಿ ಹೇಳಿದರು.

### ದ್ವಿಪಕ್ಷೀಯ ಮಾತುಕತೆ

1,460 ಕೋಟಿ ವಿಶೇಷ ಆರ್ಥಿಕ ಪ್ಯಾಕೇಜ್ ಘೋಷಣೆ

ಭಾರತ-ಸೆಶೆಲ್ಸ್ ನಡುವಿನ ವ್ಯಾಪಾರ, ಭದ್ರತೆ, ಅಭಿವೃದ್ಧಿ ಹಾಗೂ ಪ್ರಾದೇಶಿಕ ಸಹಕಾರದ ಕುರಿತು ಉಭಯ ನಾಯಕರು ಸಮಗ್ರ ಚರ್ಚೆ ನಡೆಸಿದರು. ಮೂರು ದಿನಗಳ ಪ್ರವಾಸದಲ್ಲಿರುವ ಪ್ರಧಾನಿ ಮೋದಿ ಸೋಮವಾರ ನಡೆಯಲಿರುವ ಸೆಶೆಲ್ಸ್ ರಾಷ್ಟ್ರೀಯ ದಿನಾಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದು, ರಾಷ್ಟ್ರೀಯ ಅಸೆಂಬ್ಲಿಯನ್ನು ಉದ್ದೇಶಿಸಿ ಭಾಷಣ ಮಾಡುವ ಜೊತೆಗೆ ಭಾರತೀಯ ಸಮುದಾಯದವರೊಂದಿಗೆ ಸಂವಾದ ನಡೆಸಲಿದ್ದಾರೆ.

ಪ್ರಶಸ್ತಿ ಸ್ವೀಕರಿಸಿದ ಪ್ರಧಾನಿ ಮೋದಿ, ಈ ಗೌರವವನ್ನು ಹವಾಮಾನ ಬದಲಾವಣೆಯ ವಿರುದ್ಧ ಹೋರಾಡುತ್ತಿರುವ ಎಲ್ಲಾ ರಾಷ್ಟ್ರಗಳಿಗೆ ಸಮರ್ಪಿಸಿದರು. ಪರಿಸರ ಸಂರಕ್ಷಣೆ ಮುಂದಿನ ಪೀಳಿಗೆಯ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಪ್ರಧಾನಿ ಮೋದಿಗೆ ಮತ್ತೊಂದು ಜಾಗತಿಕ ಗೌರವ

ಉಭಯ ದೇಶಗಳ ಪ್ರಗತಿಗೆ ಭಾರತ ಸದಾ ಬದ್ಧ

ಹವಾಮಾನ ಹೋರಾಟಕ್ಕೆ ಸಮರ್ಪಣೆ

ಸೀಶೆಲ್ಸ್ ಕೋಸ್ಟ್ ಗಾರ್ಡ್‌ಗೆ ಸೇರಿದ 'ಮೇಡ್ ಇನ್ ಇಂಡಿಯಾ' ಹಡಗು




ಭಾರತ ಮತ್ತು ಸೀಶೆಲ್ಸ್ ರಕ್ಷಣಾ ಪಾಲುದಾರಿಕೆಯ ಭಾಗವಾಗಿ ಪ್ರಧಾನಿ ಮೋದಿ ಅವರು 'ಲೆಸ್‌ಪವರ್' ಹೆಸರಿನ ಫಾಸ್ಟ್ ಪೆಟ್ರೋಲ್ ವೆಸೆಲ್ ಹಡಗನ್ನು ಸೀಶೆಲ್ಸ್ ಕೋಸ್ಟ್ ಗಾರ್ಡ್‌ಗೆ ಹಸ್ತಾಂತರಿಸಿದರು. ಗೋವಾ ಶಿಪ್‌ಯಾರ್ಡ್ ಲಿಮಿಟೆಡ್ ಅತ್ಯಂತ ಸ್ವದೇಶಿ ತಂತ್ರಜ್ಞಾನದಲ್ಲಿ ನಿರ್ಮಿಸಿರುವ ಈ 'ಮೇಡ್ ಇನ್ ಇಂಡಿಯಾ' ಹಡಗು ಆ ದೇಶದ ಕಡಲ ಭದ್ರತೆಯನ್ನು ಹೆಚ್ಚಿಸಲಿದೆ. ಇದರೊಂದಿಗೆ 6 ಆಂಬ್ಯುಲೆನ್ಸ್‌ಗಳು, 10 ಯುಟಿಲಿಟಿ ವಾಹನಗಳು ಮತ್ತು 5 ಲೇಸರ್ ರೇಡಿಯಲ್ ದೋಣಿಗಳನ್ನು ಸೀಶೆಲ್ಸ್ ರಕ್ಷಣಾ ಪಡೆಗಳಿಗೆ ಉಡುಗೊರೆಯಾಗಿ ನೀಡಲಾಯಿತು.

### ಸಂಸತ್ ಉದ್ದೇಶಿಸಿ ಭಾಷಣ

ಜೂನ್ 28 ಸೀಶೆಲ್ಸ್ ರಾಷ್ಟ್ರೀಯ ಅಸೆಂಬ್ಲಿಯನ್ನು ಉದ್ದೇಶಿಸಿ ಮೋದಿ ಅವರು ಮಾಡಿದ ಐತಿಹಾಸಿಕ ಭಾಷಣ ಮಾಡಿದರು. ಹಿಂದೂ ಮಹಾಸಾಗರ ವಲಯದಲ್ಲಿ ಸುರಕ್ಷತೆ ಮತ್ತು ಪ್ರಗತಿ ಎಲ್ಲರಿಗೂ ಸಿಗಬೇಕು ಎಂಬುದು ಭಾರತದ ಆಶಯವಾಗಿದೆ. ಕಡಲ್ಗಳ್ಳತನ ಮಾದಕ ದ್ರವ್ಯ ಸಾಗಣೆ ಮತ್ತು ಮಾನವ ಹಳ್ಳದಂತಹ ಜಾಗತಿಕ ಸವಾಲುಗಳನ್ನು ಎದುರಿಸಲು ಸೀಶೆಲ್ಸ್ ರಕ್ಷಣಾ ಪಡೆಗಳಿಗೆ ಭಾರತವು ಸದಾ ರಕ್ಷಣಾ ತರಬೇತಿ ಹಾಗೂ ಯುದ್ಧನೌಕೆಗಳ ತಾಂತ್ರಿಕ ಬೆಂಬಲವನ್ನು ಮುಂದುವರಿಸಲಿದೆ ಎಂದು ಭರವಸೆ ನೀಡಿದರು. ಸೀಶೆಲ್ಸ್‌ನ ಪ್ರಗತಿಯಲ್ಲಿ ಅಲ್ಲಿ ನೆಲೆಸಿರುವ ಸಣ್ಣ ಭಾರತೀಯ ಸಮುದಾಯದ ಪಾತ್ರವನ್ನು ಶ್ಲಾಘಿಸಿದ ಪ್ರಧಾನಿ, ಭಾರತೀಯರು ಸೀಶೆಲ್ಸ್ ಸಮಾಜ ಮತ್ತು ಆರ್ಥಿಕತೆಯ ಅವಿಭಾಜ್ಯ ಅಂಗವಾಗಿದ್ದಾರೆ ಎಂದು ಹೆಮ್ಮೆಯಿಂದ ಹೇಳಿದರು. ಉಭಯ ದೇಶಗಳ ನಾಗರಿಕರ ನಡುವಿನ ಸಾಂಸ್ಕೃತಿಕ ಮತ್ತು ಪ್ರವಾಸೋದ್ಯಮ ವಿನಿಮಯವನ್ನು ಮತ್ತಷ್ಟು ಸರಳಗೊಳಿಸಲು ಭಾರತ ಕ್ರಮ ಕೈಗೊಳ್ಳಲಿದೆ ಎಂದರು. ಭಾರತದ ಹೆಮ್ಮೆಯ ಕಾರ್ಯಕ್ರಮದ ಮೂಲಕ ಸೀಶೆಲ್ಸ್‌ನ ಯುವಕರಿಗೆ ಮತ್ತು ಸರ್ಕಾರಿ ಅಧಿಕಾರಿಗಳಿಗೆ ಉನ್ನತ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ತರಬೇತಿಯನ್ನು ಹೆಚ್ಚಿಸಲಾಗುವುದು. ಜೊತೆಗೆ, ಭಾರತದ ಡಿಜಿಟಲ್ ಪಾವತಿ ವ್ಯವಸ್ಥೆ ಮತ್ತು ತಂತ್ರಜ್ಞಾನವನ್ನು ಸೀಶೆಲ್ಸ್‌ನಲ್ಲೂ ವಿಸ್ತರಿಸುವ ಕುರಿತು ಜಂಟಿ ಸಹಭಾಗಿತ್ವದ ಭರವಸೆಯನ್ನು ನೀಡಿದರು. ಎರಡೂ ದೇಶಗಳ ನಡುವೆ ರಕ್ಷಣೆ, ಕಡಲ ಭದ್ರತೆ, ತಂತ್ರಜ್ಞಾನ ಮತ್ತು ಜಂಟಿ ನೌಕಾ ತರಬೇತಿ ಪ್ರಮುಖ ಕ್ಷೇತ್ರಗಳಲ್ಲಿ ಹೊಸ ದ್ವಿಪಕ್ಷೀಯ ಒಪ್ಪಂದಗಳಿಗೆ ಸಹಿ ಹಾಕಲಾಗಿದ್ದು, ಸಂಬಂಧ ಮತ್ತಷ್ಟು ಗಟ್ಟಿಯಾಗಿದೆ.

### ಪುರಾತನ ಆಮೆ ಭೇಟಿ ಮಾಡಿದ ಮೋದಿ



ವಿಶ್ವದ ಪ್ರತಿಯೊಂದು ದೇಶಗಳೂ ಒಂದಿಲ್ಲೊಂದು ವಿಶೇಷತೆಯನ್ನು ಹೊಂದಿರುತ್ತವೆ. ನಿಸರ್ಗ ಇಂತಹ ವಿಶೇಷತೆಗಳನ್ನು ಜಗತ್ತಿನ ಮೂಲೆಗಳಿಗೂ ಸಮಾನವಾಗಿ ಹಂಚಿರುತ್ತದೆ.

ಅದರಂತೆ ಹಿಂದೂ ಮಹಾಸಾಗರ ದ್ವೀಪದಲ್ಲಿರುವ ಸಿಶೆಲ್ಸ್ ಎಂಬ ಪುಟ್ಟ ರಾಷ್ಟ್ರ, ದೈತ್ಯ ಆಮೆಗಳ ನೆಲೆ. ಇಲ್ಲಿ ಎರಡು ಶತಮಾನಗಳಷ್ಟು ಪುರಾತನವಾದ ಆಮೆಗಳು ಈಗಲೂ ಓಡಾಡಿಕೊಂಡಿವೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸಿಶೆಲ್ಸ್ ರಾಷ್ಟ್ರೀಯ ದಿನಾಚರಣೆಗೆ ಗೌರವಾನ್ವಿತ ಅತಿಥಿಯಾಗಿ ಆ ದೇಶಕ್ಕೆ ಭೇಟಿ ನೀಡಿದ್ದು, ಅಲ್ಲಿನ ರಾಷ್ಟ್ರೀಯ ಸಸ್ಯೋದ್ಯಾನದಲ್ಲಿರುವ ವಿಶ್ವದ ಅತ್ಯಂತ ಪುರಾತನ ಮತ್ತು ದೈತ್ಯ ಆಮೆಗಳನ್ನು ಭೇಟಿ ಮಾಡಿದ್ದಾರೆ. ಈ ವೇಳೆ 194 ವರ್ಷದ ಜೋನಾಥನ್ ಹೆಸರಿನ ಆಮೆಯನ್ನೂ ಪ್ರಧಾನಿ ಮೋದಿ ಭೇಟಿ ಮಾಡಿದ್ದಾರೆ.

ಭಾರತ ಮತ್ತು ಸೀಶೆಲ್ಸ್ ನಡುವಿನ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ 50ನೇ ವಾರ್ಷಿಕೋತ್ಸವದ ಸಂದರ್ಭದಲ್ಲಿ, ಸಿಶೆಲ್ಸ್ ಪ್ರಧಾನಿ ಮೋದಿ ಅವರನ್ನು ಆಹ್ವಾನಿಸಿದೆ. ಈ ವೇಳೆ ರಾಷ್ಟ್ರೀಯ ಸಸ್ಯೋದ್ಯಾನಕ್ಕೆ ಭೇಟಿ ನೀಡಿದ ಪ್ರಧಾನಿ ಮೋದಿ, ಜೋನಾಥನ್ ಆಮೆ ಭೇಟಿ ಮಾಡಿ ಗಮನ ಸೆಳೆದರು.

## ಪೋಲಿಯೋ ಅಭಿಯಾನಕ್ಕೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚಾಲನೆ

• ಉದಯವಾಹಿನಿ, ಬೆಂಗಳೂರು



ಸ್ವಾಸ್ಥ್ಯ ಸಮಾಜ ಮತ್ತು ಆರೋಗ್ಯಕರ ಭಾರತಕ್ಕಾಗಿ ಪಲ್ಸ್ ಪೋಲಿಯೋ ಅಭಿಯಾನಕ್ಕೆ ಎಲ್ಲರೂ ಕೈ ಜೋಡಿಸಬೇಕೆಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕರೆ ನೀಡಿದರು. ಸದಾಶಿವನಗರದ ತಮ್ಮ ಮನೆಯಲ್ಲಿ ಆಯೋಜಿಸಲಾಗಿದ್ದ ಪಲ್ಸ್ ಪೋಲಿಯೋ ರಾಷ್ಟ್ರೀಯ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ಬುದ್ಧಿವಂತರಿದ್ದಾರೆ. ಸಮಾಜಕ್ಕೆ ನಾವೇ ಮೊದಲು ಮಾದರಿಯಾಗಬೇಕು ಎಂಬ ಹಿನ್ನೆಲೆಯಲ್ಲಿ ನನ್ನ ಮನೆಯಿಂದಲೇ ಲಸಿಕಾ ಅಭಿಯಾನವನ್ನು ಆರಂಭಿಸಿದ್ದಾರೆ.

ನನ್ನ ಮೊಮಗಳಿಗೆ ಲಸಿಕೆ ಹಾಕುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದ್ದೇನೆ ಎಂದು ಹೇಳಿದರು. ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರು 1972ರಲ್ಲಿ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನವನ್ನು ಆರಂಭಿಸಿದ್ದರು. ರಾಜೀವ್ ಗಾಂಧಿ ಅವರು ಪ್ರಧಾನಿಯಾಗಿದ್ದಾಗ ಅಭಿಯಾನ ದೊಡ್ಡ ಪ್ರಮಾಣದಲ್ಲಿ ನಡೆದಿತ್ತು. ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗ ಪೋಲಿಯೋ ಮುಕ್ತ ಭಾರತ ಎಂದು ಘೋಷಣೆಯಾಗಿದೆ.

ಮಕ್ಕಳನ್ನು ಅಂಗವಿಕಲತೆಯಿಂದ ಕಾಪಾಡುವ ಅಭಿಯಾನದ ಉದ್ದೇಶ ಸಾಕಾರಗೊಂಡಿದೆ. ಆದರೂ ಅಭಿಯಾನವನ್ನು ಮುಂದುವರೆಸಿದ್ದೇವೆ. ನೆರೆಯ ರಾಷ್ಟ್ರಗಳಲ್ಲಿ ಲಸಿಕೆ ಇಲ್ಲದೇ ಪೋಲಿಯೋ ವೈರಸ್ ಜೀವಂತವಾಗಿದೆ. ಅದರಿಂದ ಭಾರತಕ್ಕೆ ತೊಂದರೆಮಾಡಬಾರದು ಎಂಬ ಕಾರಣಕ್ಕಾಗಿ ಮುನ್ನೆಚ್ಚರಿಕೆ ವಹಿಸುವುದಾಗಿ ಹೇಳಿದರು.

ರಾಜ್ಯದಲ್ಲಿ 60 ಲಕ್ಷಕ್ಕೂ ಹೆಚ್ಚಿನ ಮಕ್ಕಳಿಗೆ ಲಸಿಕೆ ಹಾಕಲು ನಿರ್ಧರಿಸಲಾಗಿದೆ. ಇದಕ್ಕೆ ಎನ್‌ಜಿಓಗಳು, ಸಂಘ ಸಂಸ್ಥೆಗಳು, ಆರೋಗ್ಯ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಅಭಿಯಾನಕ್ಕೆ ಸಹಕರಿಸಿದ್ದಾರೆ ಎಂದು ಹೇಳಿದರು. ಕರ್ನಾಟಕ ಹೆಲ್ತ್ ಟೂರಿಸಂನಲ್ಲಿ ವಿಶ್ವಮಾನ್ಯತೆ ಪಡೆದಿದೆ. ಈ ಮೊದಲು ಚಿಕಿತ್ಸೆ ಹಾಗೂ ಶಸ್ತ್ರ ಚಿಕಿತ್ಸೆಗೆ ಬೇರೆ ದೇಶಗಳಿಗೆ ಹೋಗುತ್ತಿದ್ದವರು ಈಗ ಕರ್ನಾಟಕದತ್ತ ಬರುತ್ತಿದ್ದಾರೆ. ಇಲ್ಲಿ ಉತ್ತಮ ಚಿಕಿತ್ಸೆ ಕೈಗೆಟಕುವ ದರದಲ್ಲಿ ಸಿಗುತ್ತಿದೆ ಎಂಬ ನಂಬಿಕೆಯಿದೆ ಎಂದು ಹೇಳಿದರು. ಕರ್ನಾಟಕದಲ್ಲಿ ಪ್ರತಿ ವರ್ಷ 13,940 ವೈದ್ಯರನ್ನು ಒಳಗೊಂಡಂತೆ 1.07ಲಕ್ಷ ವೈದ್ಯಕೀಯ ಸಿಬ್ಬಂದಿಗಳು ತಯಾರಾಗುತ್ತಿದ್ದಾರೆ. ದೇಶದ ಎಲ್ಲಿಯೂ ಈ ಪ್ರಮಾಣದಲ್ಲಿ ವೈದ್ಯಕೀಯ ಸಿಬ್ಬಂದಿಗಳು ಸಿಗುತ್ತಿಲ್ಲ. ನಮಲ್ಲಿ ವಿದ್ಯಾಭ್ಯಾಸ ಪಡೆದವರು ಹೊರ ದೇಶಗಳ ಆರೋಗ್ಯ ಸೇವೆಗೆ ವಲಸೆ ಹೋಗುತ್ತಿದ್ದಾರೆ ಎಂದರು.

ಕಳೆದ ಮೂರು ವರ್ಷಗಳಿಂದಲೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಯಾವುದೇ ವಿವಾದಗಳಿಲ್ಲದೇ ಉತ್ತಮವಾಗಿ ಕೆಲಸ ನಿರ್ವಹಿಸುತ್ತಿದೆ. ಮುಂದಿನ ದಿನಗಳಲ್ಲೂ ಇದೇ ರೀತಿಯ ಜವಾಬ್ದಾರಿಗಳನ್ನು ನಿರ್ವಹಣೆ ಮಾಡಲಾಗುತ್ತಿದೆ ಎಂದು ಹೇಳಿದರು.

ಸಚಿವ ಯು.ಟಿ.ಖಾದರ್ ಮಾತನಾಡಿ, ಲಸಿಕಾ ಅಭಿಯಾನಕ್ಕೆ ಎಲ್ಲರೂ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

## ಬಿಡದಿ ಟೌನ್‌ಶಿಪ್ ವಿವಾದ ನ್ಯಾಯಾಲಯದಲ್ಲಿ ತೀರ್ಮಾನವಾಗಲಿ

• ಉದಯವಾಹಿನಿ, ಬೆಂಗಳೂರು



ಬಿಡದಿ ಟೌನ್‌ಶಿಪ್ ವಿರೋಧಿಸುತ್ತಿರುವ ರೈತರ ಭಾವನೆಗಳ ವಿಚಾರದಲ್ಲಿ ರಾಜ್ಯ ಸರ್ಕಾರ ಚೆಲ್ಲಾಟವಾಡುತ್ತಿದ್ದು, ಅಂತಿಮವಾಗಿ ಈ ವಿಚಾರ ನ್ಯಾಯಾಲಯದಲ್ಲೇ ತೀರ್ಮಾನವಾಗಬೇಕಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಟೌನ್‌ಶಿಪ್ ವಿರೋಧಿಸಿ 475 ದಿನಗಳಿಂದಲೂ ರೈತರು ಹೋರಾಟ ನಡೆಸುತ್ತಿದ್ದಾರೆ. ಸರ್ಕಾರ ನಡೆಸುವವರು ಈ ಯೋಜನೆಯನ್ನು ಪ್ರತಿಷ್ಠೆಯಾಗಿ ಪರಿಗಣಿಸಿದ್ದಾರೆ. ಟೌನ್‌ಶಿಪ್ ಹೆಸರಿನಲ್ಲಿ ಸಾವಿರಾರು ಕೋಟಿ ರೂ. ಅಕ್ರಮಕ್ಕೆ ಬಾಗಿಲು ತೆರೆದಿದ್ದಾರೆ ಎಂದು ಆರೋಪಿಸಿದರು.

ಫಲವತ್ತಾದ ಭೂಮಿಯನ್ನು ಅಭಿವೃದ್ಧಿ ಹೆಸರಿನಲ್ಲಿ ಭೂಸ್ವಾಧೀನ ಮಾಡಿಕೊಳ್ಳಲಾಗುತ್ತಿದೆ. ಬೆಳೆ ಬೆಳೆಯಲಾಗದ ಕಡೆಗಳಲ್ಲಿ ಯೋಜನೆ ಕೈಗೊಳ್ಳಲಿ. ಆದರೆ ಬಿಡದಿಯಲ್ಲಿ ಸರ್ಕಾರಿ ಭೂಮಿಯನ್ನು ಲಪಟಾಯಿಸಲು ಮಧ್ಯವರ್ತಿಗಳಿಗೆ ಬೆಂಬಲ ಕೊಡುತ್ತಿದೆ ಎಂದು ಟೀಕಿಸಿದರು.

ಚಿಕ್ಕಬಳ್ಳಾಪುರದಲ್ಲಿ ಜೆಡಿಎಸ್ ಮುಖಂಡನನ್ನು ಬಂಧಿಸಿರುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಕುಮಾರಸ್ವಾಮಿ, ಜೆಡಿಎಸ್ ಕಾರ್ಯಕರ್ತರು ಉದ್ವೇಗಕ್ಕೆ ಒಳಗಾಗುವುದು ಬೇಡ. ಪ್ರಚೋದನೆ ಮಾಡಲೆಂದೇ ಒಂದು ಗುಂಪು ಕೆಲಸ ಮಾಡುತ್ತಿದೆ. ಚಪ್ಪಲಿ ಎಸೆಯುವುದು ನಮ್ಮ ಸಂಸ್ಕೃತಿಯಲ್ಲ. ಯಾರ ವಿರುದ್ಧವೂ ಧಿಕ್ಕಾರ ಕೂಗುವುದು ಬೇಡ, ಸಮಾಜದಲ್ಲಿ ಅಶಾಂತಿ ಉಂಟು ಮಾಡುವುದು ಬೇಡ ಎಂದು ಕಿವಿಮಾತು ಹೇಳಿದರು. ಪ್ರಚೋದನೆಗೆ ಒಳಗಾಗದೇ ಶಾಂತಚಿತ್ತದ ನಡವಳಿಕೆಯನ್ನು ರೂಢಿಸಿಕೊಳ್ಳಿ ಎಂದ ಅವರು, ಶಾಸಕ ಪ್ರದೀಪ್ ಈಶ್ವರ್ ನಡವಳಿಕೆ ಬಗ್ಗೆ ಪ್ರತಿಕ್ರಿಯಿಸದೆ ಕೈಮುಗಿದರು. ವಿಧಾನಪರಿಷತ್ ಚುನಾವಣೆಯಲ್ಲಿ ಶಾಸಕರು ಅಡ್ಡಮತದಾನ ಮಾಡಿರುವ ವಿಚಾರಕ್ಕೆ ಹೆಚ್ಚು ಮಹತ್ವ ಕೊಡದೆ ಇಲ್ಲಿಗೆ ಕೈಬಿಡಬೇಕು ಎಂದರು. 2013ರಲ್ಲಿ ಹಲವು ಭಾಗ್ಯದ ಯೋಜನೆಗಳನ್ನು ಜಾರಿ ಮಾಡಿದರೂ 2018ರಲ್ಲಿ ಕಾಂಗ್ರೆಸ್ ನಾಯಕರು ಯಾರ ಮನೆ ಬಾಗಿಲಿಗೆ ಬಂದಿದ್ದರು ಎಂದು ಸಚಿವರಾದ ಎಂ.ಬಿ.ಪಾಟೀಲ್, ಪ್ರಿಯಾಂಕ್ ಖರ್ಗೆ ಅವರ ಹೇಳಿಕೆಗೆ ತಿರುಗೇಟು ನೀಡಿದರು.

ಅಂದು ನಿಮ ಅಸ್ತಿತ್ವ ಉಳಿಸಿಕೊಳ್ಳಲು ನಮ ಮನೆ ಬಾಗಿಲಿಗೆ ಬಂದಿದ್ದೀರಿ. ಮುಂದಿನ ಚುನಾವಣೆಯಲ್ಲಿ ಜನ ನಿಮನ್ನು ತಿರಸ್ಕಾರ ಮಾಡುತ್ತಾರೆ.


ಜನರ ಪರವಾಗಿ ಹೋರಾಟ ಮಾಡುವ ಪಕ್ಷ ನಮದು. ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಕಾವೇರಿ ವಿಚಾರದಲ್ಲಿ ನಿರಂತರವಾಗಿ ಹೋರಾಟ ಮಾಡುತ್ತಾ ಬಂದಿದ್ದಾರೆ. ಕಾಂಗ್ರೆಸ್‌ನವರಿಗೆ ಅಗತ್ಯ ಬಿದ್ದಾಗ ಯಾರ ಕಾಲನ್ನೂ ಬೇಕಾದರೂ ಹಿಡಿಯುತ್ತಾರೆ.

ತಮಿಳುನಾಡಿನ ಡಿಎಂಕೆ ಜೊತೆ ಸೇರಿದ್ದವರು. ಈಗ ಅಧಿಕಾರಕ್ಕೆ ಬಂದ ಟಿವಿಕೆ ಜೊತೆ ಹೋಗಿದ್ದಾರೆ. ನಿಮ ಪಕ್ಷದ ಬಗ್ಗೆ ಚರ್ಚೆ ಮಾಡಬೇಕೆ ಎಂದು ಖಾರವಾಗಿ ಪ್ರತಿಕ್ರಿಸಿದರು.

# ನಶೆ ಮುಕ್ತ ಸಮಾಜ ನಿರ್ಮಾಣಕ್ಕೆ ಉಪರಾಷ್ಟ್ರಪತಿ ರಾಧಾಕೃಷ್ಣನ್ ಕರೆ

## ಕರ್ನಾಟಕವನ್ನು ವ್ಯಸನ ಮುಕ್ತಗೊಳಿಸುವುದಾಗಿ ಮುಖ್ಯಮಂತ್ರಿಗಳು ಘೋಷಣೆ; ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಸಲಹೆ

• ಉದಯವಾಹಿನಿ, ಬೆಂಗಳೂರು



ಮಾದಕ ದ್ರವ್ಯ ಮುಕ್ತ ಸಮಾಜ ನಿರ್ಮಿಸಲು ಪ್ರತಿಯೊಬ್ಬರೂ ಸಂಕಲ್ಪ ಬದ್ಧರಾಗಿ ತೊಡಗಿಸಿಕೊಳ್ಳಬೇಕು ಎಂದು ಉಪ ರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಕರೆ ನೀಡಿದ್ದಾರೆ. ರಾಜೀವ್ ಗಾಂಧಿ ವಿಜ್ಞಾನ ವಿಶ್ವವಿದ್ಯಾಲಯದ 31ನೇ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಆಯೋಜಿಸಲಾಗಿದ್ದ ನಶಾ ಮುಕ್ತ ಭಾರತ ಅಭಿಯಾನ ಮತ್ತು ಅಂತಾರಾಷ್ಟ್ರೀಯ ಮಾದಕ ವಸ್ತುಗಳ ದುರುಪಯೋಗ ತಡೆ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಾದಕ ವಸ್ತುಗಳು ಒಬ್ಬ ವ್ಯಕ್ತಿಯ ಜೀವನವನ್ನಷ್ಟೇ ನಾಶ ಮಾಡುವುದಿಲ್ಲ, ಬದಲಾಗಿ ದೇಶದ ಉತ್ಪಾದನಾ ಸಾಮಾರ್ಥ್ಯವನ್ನು ಮತ್ತು ಸಾಮಾಜಿಕ ಸ್ವಾಸ್ಥ್ಯವನ್ನು ಕುಗ್ಗಿಸುತ್ತದೆ. ಇದರಿಂದ ಸಮಾಜ, ಕುಟುಂಬ ಮತ್ತು ದೇಶಕ್ಕೆ ಭಾರೀ ನಷ್ಟವಾಗುತ್ತದೆ ಎಂದು ಹೇಳಿದರು. ಪ್ರತಿಯೊಬ್ಬ ವ್ಯಕ್ತಿಯನ್ನು ಆತನ ಆತಸಾಕ್ಷಿ ನಿಯಂತ್ರಿಸಬೇಕು. ಮಾದಕ ವಸ್ತು ಸೇರಿದಂತೆ ಬಾಹ್ಯವಾದ ಯಾವುದೇ ವಿಷಯಗಳು ನಿಯಂತ್ರಿಸಬಾರದು ಎಂದು ಸಲಹೆ ನೀಡಿದರು. ಮಾದಕ ವ್ಯಸನಿಗಳಾಗದೇ ಇರುವುದು ಇಂದಿನ ಅಗತ್ಯವಾಗಿದೆ. ಶಾಲಾ, ಕಾಲೇಜುಗಳ ತರಗತಿಗಳಿಂದಲೇ ಜಾಗೃತಿ ಆರಂಭವಾಗಬೇಕು. ನಮ ಮನೆ, ಶಾಲೆ-ಕಾಲೇಜು ಆವರಣ, ನಗರ, ಜಿಲ್ಲೆ, ರಾಜ್ಯ ತನ್ಮೂಲಕ ಭಾರತ ನಶಾ ಮುಕ್ತಗೊಳ್ಳಬೇಕು. ಇದರೊಂದಿಗೆ ವಿಶ್ವವನ್ನೇ ಮಾದಕ ವ್ಯಸನ ಮುಕ್ತಗೊಳಿಸುವ ಗುರಿಯೊಂದಿಗೆ ಸಾಕ್ಷ್ಯಾಧಾರಿತ ಪರಿಹಾರ ದೊರಕಿಸಲು ಪ್ರತಿಯೊಬ್ಬರೂ ಕ್ರಮ ಕೈಗೊಳ್ಳಬೇಕೆಂದು ಅವರು ಹೇಳಿದರು. ದೆಹಲಿಯಲ್ಲಿ ಈ ನಿಟ್ಟಿನಲ್ಲಿ ದೊಡ್ಡ ಮಟ್ಟದ ಪ್ರಗತಿಯಾಗಿದೆ. ಮೂರು ವಿಶ್ವವಿದ್ಯಾಲಯಗಳು ಮಾದಕ ವ್ಯಸನದಿಂದ ಮುಕ್ತಗೊಂಡಿವೆ. ಕರ್ನಾಟಕವನ್ನು ವ್ಯಸನ ಮುಕ್ತಗೊಳಿಸುವುದಾಗಿ ಮುಖ್ಯಮಂತ್ರಿಗಳು ಘೋಷಣೆ ಮಾಡಿದ್ದಾರೆ.

ಅದಕ್ಕನುಗುಣವಾಗಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಸಲಹೆ ನೀಡಿದರು. ಮೊದಲು ಪ್ರತಿಯೊಬ್ಬರೂ ವ್ಯಕ್ತಿಗತವಾದ ಇಚ್ಛಾಶಕ್ತಿಯನ್ನು ಪ್ರದರ್ಶಿಸಬೇಕು. ನಂತರ ನೆರಹೊರೆಯಲ್ಲೂ ಜಾಗೃತಿ ಮೂಡಿಸಬೇಕು. ಇಲ್ಲಿ ಜನ ವಾಸಕ್ಕೆ ಯೋಗ್ಯವಾದ ಪರಿಸರ ಇದೆ ಎಂದು ಉಪ ರಾಷ್ಟ್ರಪತಿ ಅವರು ಮೆಚ್ಚುಗೆ ವ್ಯಕ್ತಪಡಿಸಿದರು. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕರ್ನಾಟಕ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್, ಆಂಧ್ರಪ್ರದೇಶದ ರಾಜ್ಯಪಾಲ ಅಬ್ದುಲ್ ನಜೀರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್, ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣ ಪ್ರಕಾಶ್ ಪಾಟೀಲ್, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಉಪ ಕುಲಪತಿ ಡಾ.ಬಿ.ಸಿ.ಭಗವಾನ್ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಮಾದಕ ದ್ರವ್ಯ ನಿಯಂತ್ರಣ ಸಂಸ್ಥೆಯ ಪ್ರಾದೇಶಿಕ ಆಯುಕ್ತ ಸಚಿನ್ ಗೋರ್ಪಡೆ, ಮಾದಕ ವಸ್ತುಗಳ ಹಾವಳಿ ಮತ್ತು ನಿಯಂತ್ರಣಗಳ ಬಗ್ಗೆ ಉಪನ್ಯಾಸ ನೀಡಿದರು. ಇದೇ ವೇಳೆ ಉಪ ರಾಷ್ಟ್ರಪತಿಯವರು ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆ ಹಾಕುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು.

### ವ್ಯಸನ ಮುಕ್ತ ಭಾರತ ನಿರ್ಮಿಸಲು ಸಾಧ್ಯ

ಮಾದಕ ವಸ್ತುವಿನ ಹಾವಳಿ ವಿರುದ್ಧವಾಗಿ ಭೌಗೋಳಿಕತೆ, ಲಿಂಗತಾರತಮ್ಯ, ವಯಸ್ಸಿನ ಭೇದ ಹಾಗೂ ಸಾಮಾಜಿಕ ಸ್ಥಾನಮಾನದ ಹೊರತಾಗಿಯೂ ಸಂಕಲ್ಪ ತೊಡಬೇಕಿದೆ. ಸಂಘಟಾನಾತಕ ಪ್ರಯತ್ನದಿಂದ ಮಾತ್ರ ವ್ಯಸನ ಮುಕ್ತ ಭಾರತ ನಿರ್ಮಿಸಲು ಸಾಧ್ಯ ಎಂದು ಅವರು ಹೇಳಿದರು. ರಾಜೀವ್ ಗಾಂಧಿ ವಿಶ್ವವಿದ್ಯಾಲಯ ದೇಶದ ವೈದ್ಯಕೀಯ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದೆ. ಇಲ್ಲಿ ವ್ಯಾಸಂಗ ಮಾಡಿದ ವೈದ್ಯಕೀಯ ಪದವೀಧರರು ವಿಶ್ವಾದಾದ್ಯಂತ ಸೇವೆ ಸಲ್ಲಿಸುತ್ತಿರುವುದು ಹೆಮೆಯ ವಿಚಾರ ಎಂದರು.

ಈ ದಿನದ ದರ | ಪೆಟ್ರೋಲ್: 111.68 ₹/L | ಡೀಸೆಲ್ : 99.56₹/L | ಬಂಗಾರ: ₹ 14, 395/Gram 24ct ₹13,195/Gram 22ct | ಬೆಳ್ಳಿ: ₹240.00/Gram

# ಗಗನಯಾನಕ್ಕೆ ಭಾರತ ಸಜ್ಜು: 2027ರಲ್ಲಿ ಮೊದಲ ಮಾನವ ಸಹಿತ ಬಾಹ್ಯಾಕಾಶ ಯಾನ; 8,000ಕ್ಕೂ ಹೆಚ್ಚು ಪರೀಕ್ಷೆಗಳು ಯಶಸ್ವಿ ಇಸ್ರೋ

• ಉದಯವಾಹಿನಿ, ಬೆಂಗಳೂರು

ಭಾರತದ ಮಹತ್ವಾಕಾಂಕ್ಷೆಯ ಮಾನವ ಸಹಿತ ಬಾಹ್ಯಾಕಾಶ ಯೋಜನೆಯಾದ ಗಗನಯಾನ ಮಿಷನ್ ನಿಗದಿತ ವೇಳಾಪಟ್ಟಿಯಂತೆ ಮುಂದುವರಿಯುತ್ತಿದ್ದು, 2027ರ ಮೂರನೇ ತ್ರೈಮಾಸಿಕದಲ್ಲಿ ಮೊದಲ ಉಡಾವಣೆ ನಡೆಸುವ ಗುರಿ ಹೊಂದಲಾಗಿದೆ ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ) ಅಧ್ಯಕ್ಷ ಹಾಗೂ ಕೇಂದ್ರ ಬಾಹ್ಯಾಕಾಶ ಇಲಾಖೆಯ ಕಾರ್ಯದರ್ಶಿ ವಿ. ನಾರಾಯಣನ್ ತಿಳಿಸಿದ್ದಾರೆ.

ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ ಮ್ಯಾನೇಜ್ಮೆಂಟ್ ಅಕಾಡೆಮಿಯಲ್ಲಿ ವಾಯುಪಡೆಯ ಸಂಘ (ಕರ್ನಾಟಕ) ಆಯೋಜಿಸಿದ್ದ 17ನೇ ವಾರ್ಷಿಕ ಏರ್ ಚೀಫ್ ಮಾರ್ಷಲ್ ಎಲ್ ಎಂ ಕತ್ರೆ ಸ್ಮಾರಕ ಉಪನ್ಯಾಸದಲ್ಲಿ ನಾರಾಯಣನ್ ಮುಖ್ಯ ಉಪನ್ಯಾಸಕರಾಗಿ ಮಾತನಾಡಿದರು.



ಉದಯವಾಹಿನಿ ಚಿತ್ರ

**ಭಾರತೀಯ ಬಾಹ್ಯಾಕಾಶ ಕಾರ್ಯಕ್ರಮ:** ಸವಾಲುಗಳು ಮತ್ತು ಮುಂದಿನ ದಾರಿ ವಿಷಯದ ಕುರಿತು ಮಾತನಾಡಿದ ಅವರು, ಗಗನಯಾನ ಯೋಜನೆಗೆ ಸಂಬಂಧಿಸಿದಂತೆ ಈಗಾಗಲೇ 8,000ಕ್ಕೂ ಹೆಚ್ಚು ನೆಲಮಟ್ಟದ ಪರೀಕ್ಷೆಗಳು ಯಶಸ್ವಿಯಾಗಿ ಪೂರ್ಣಗೊಂಡಿವೆ ಎಂದು ಹೇಳಿದರು. ಪ್ರಸ್ತುತ ಗಗನಯಾನ ಯೋಜನೆಯ ಮೊದಲ ಮಾನವರಿಲ್ಲದ ಮಿಷನ್‌ಗಾಗಿ ಸಿದ್ಧತೆಗಳು ನಡೆಯುತ್ತಿವೆ. ಬಳಿಕ ಮಾನವ ಸಹಿತ ಉಡಾವಣೆಯನ್ನು 2027ರ ಮೂರನೇ ತ್ರೈಮಾಸಿಕದಲ್ಲಿ ನಡೆಸುವ ಗುರಿಯನ್ನು ಇಸ್ರೋ ಹೊಂದಿದೆ ಎಂದು ತಿಳಿಸಿದರು.

ಇದೇ ವೇಳೆ ಇಸ್ರೋ ಸಹಭಾಗಿತ್ವವನ್ನು ಉಲ್ಲೇಖಿಸಿದ ನಾರಾಯಣನ್, ಇಸ್ರೋ ಬೆಂಬಲವಿಲ್ಲದೆ ಇಸ್ರೋಗೆ ಉಡಾವಣಾ ವಾಹಕಗಳನ್ನು ನಿರ್ಮಿಸಲು ಹಾಗೂ ಉಪಗ್ರಹ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಲು ಸಾಧ್ಯವಾಗುತ್ತಿರಲಿಲ್ಲ ಎಂದು ಹೇಳಿದರು. ಇಸ್ರೋ ಸಾಧನೆಗಳ ಕುರಿತು ಮಾಹಿತಿ ನೀಡಿದ ಅವರು, ಸಂಸ್ಥೆ ಆರಂಭವಾದ ನಂತರ ಇದುವರೆಗೆ 4,020 ಸೌಂಡಿಂಗ್ ರಾಕೆಟ್‌ಗಳ ಉಡಾವಣೆ, 105 ಉಡಾವಣಾ ವಾಹಕ ಮಿಷನ್‌ಗಳು ಹಾಗೂ 135 ಉಪಗ್ರಹ ಮಿಷನ್‌ಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ.

> **ಕಳೆದ ಒಂದು ದಶಕದಲ್ಲಿ ಇಸ್ರೋ ಒಟ್ಟು 463 ಉಪಗ್ರಹಗಳನ್ನು ಉಡಾವಣೆ ಮಾಡಿದ್ದು, ಅವುಗಳಲ್ಲಿ 399 ವಿದೇಶಿ ಉಪಗ್ರಹಗಳು ಸೇರಿವೆ. ಅಲ್ಲದೆ, 2025-26 ಹಣಕಾಸು ವರ್ಷದಲ್ಲಿ 60ಕ್ಕೂ ಹೆಚ್ಚು ಪ್ರಮುಖ ಪರೀಕ್ಷೆಗಳು ಹಾಗೂ ತಂತ್ರಜ್ಞಾನ ಪ್ರದರ್ಶನಗಳನ್ನು ಯಶಸ್ವಿಯಾಗಿ ನಡೆಸಲಾಗಿದೆ.-ಕಾರ್ಯದರ್ಶಿ ವಿ. ನಾರಾಯಣನ್**

> **ಭಾರತೀಯ ವಾಯುಪಡೆ ಹಾಗೂ ಇಸ್ರೋನಲ್ಲಿ 42 ವರ್ಷಗಳ ಸೇವೆ ಸಲ್ಲಿಸಿದ್ದ ಏರ್ ಚೀಫ್ ಮಾರ್ಷಲ್ ಎಲ್.ಎಂ. ಕತ್ರೆ ಅವರು ಭಾರತೀಯ ವಿಮಾನಯಾನ ಕ್ಷೇತ್ರಕ್ಕೆ ನೀಡಿದ ಮಹತ್ವದ ಕೊಡುಗೆಗಳನ್ನು ಸ್ಮರಿಸಿದರು.-ನಿವೃತ್ತ ಏರ್ ಮಾರ್ಷಲ್ ಎಚ್.ಬಿ. ರಾಜಾರಾಮ್**

## ಕೆಂಪೇಗೌಡರ ಆದರ್ಶ ಮೈಗೂಡಿಸಿಕೊಳ್ಳಲು ಕರೆ


• ಉದಯವಾಹಿನಿ, ಅತ್ತಿಬೆಲೆ

ನಾಡಿನ ನಿರ್ಮಾಣಕ್ಕೆ ಅಪಾರ ಕೊಡುಗೆ ನೀಡಿದ ನಾಡಪ್ರಭು ಕೆಂಪೇಗೌಡರ ಆದರ್ಶಗಳು ಇಂದಿನ ಸಮಾಜಕ್ಕೂ ಮಾರ್ಗದರ್ಶಿಯಾಗಿದ್ದು, ಪ್ರತಿಯೊಬ್ಬರೂ ಸಹ ನಾಡಪ್ರಭು ಕೆಂಪೇಗೌಡರ ದೂರದೃಷ್ಟಿ, ಪ್ರಾಮಾಣಿಕತೆ, ಆಡಳಿತ ದಕ್ಷತೆ ಹಾಗೂ ಜನಪರ ಸೇವಾ ಮನೋಭಾವವನ್ನು ಮೈಗೂಡಿಸಿಕೊಳ್ಳಬೇಕು ಎಂದು ಅತ್ತಿಬೆಲೆ ಪುರಸಭೆ ಸದಸ್ಯ ಎಸ್.ಎಲ್.ವಿ. ಮುರಳಿರವರು ತಿಳಿಸಿದರು.

ಅತ್ತಿಬೆಲೆ ವೃತ್ತದಲ್ಲಿ ಒಕ್ಕಲಿಗ ಕುಲಬಾಂದವರು ಮತ್ತು ಗ್ರಾಮಸ್ಥರ ಸಹಯೋಗದಲ್ಲಿ ಆಯೋಜಿಸಲಾಗಿದ್ದ ನಾಡಪ್ರಭು ಕೆಂಪೇಗೌಡರ ಜಯಂತೋತ್ಸವದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ನಾಡ ಪ್ರಭು ಕೆಂಪೇಗೌಡರು ಕೇವಲ ನಗರ ನಿರ್ಮಾಣಕ್ಕೆ ಮಾತ್ರ ಸೀಮಿತರಾಗದೆ,ಕೃಷಿ, ನೀರಾವರಿ, ವ್ಯಾಪಾರ ಹಾಗೂ ಸಾಮಾಜಿಕ ಸಾಮರಸ್ಯಕ್ಕೆ ವಿಶೇಷ ಒತ್ತು ನೀಡಿದ್ದರು. ಕೆಂಪೇಗೌಡರ ಆದರ್ಶಗಳು ಎಲ್ಲರಿಗೂ ಸ್ಫೂರ್ತಿಯಾಗಿದ್ದು, ಸಮಾಜದಲ್ಲಿ ಸೌಹಾರ್ದತೆ, ಸೇವಾ ಮನೋಭಾವ ಮತ್ತು ರಾಷ್ಟ್ರಪ್ರೇಮವನ್ನು ಬೆಳೆಸುವ ಅಗತ್ಯವಿದೆ ಎಂದರು.

## ಅಹಿಂದ ಅಧಿಕಾರಿಗಳ ಜಾಗದಲ್ಲಿ ಒಕ್ಕಲಿಗರ ನೇಮಕ: ಕಾಂಗ್ರೆಸ್ ನಾಯಕರಲ್ಲಿ ಅಸಮಾಧಾನ ಭುಗಿಲು



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಡಿಕೆ ಶಿವಕುಮಾರ್ ಮುಖ್ಯಮಂತ್ರಿಯಾದ ನಂತರ ಮಾಜಿ ಸಿಎಂ ಸಿದ್ದರಾಮಯ್ಯ ಅವರ ಆಡಳಿತಾಧಿಕಾರ ಅವಧಿಯಲ್ಲಿ ಆಯಾಕಟ್ಟಿನ ಜಾಗಕ್ಕೆ ನೇಮಿಸಲಾಗಿದ್ದ ಅಹಿಂದ ಅಧಿಕಾರಿಗಳನ್ನು ಬದಲಾಯಿಸಿ ಒಕ್ಕಲಿಗ ಸಮುದಾಯದ ಅಧಿಕಾರಿಗಳನ್ನು ನೇಮಕ ಮಾಡಲಾಗುತ್ತಿದೆ. ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕಿನ ವ್ಯವಸ್ಥಾಪಕ ನಿರ್ದೇಶಕರಾಗಿದ್ದ ಸಿಎನ್ ದೇವರಾಜ್ ಅವರನ್ನು ಬದಲಾಯಿಸಿದ್ದು, ಇದೀಗ ಅವರ ಜಾಗಕ್ಕೆ ದಿವಾಕರ್ ಅವರನ್ನು ನೇಮಕ ಮಾಡಲಾಗಿದೆ. ಇನ್ನೂ ಕರ್ನಾಟಕ ಹಾಲು ಒಕ್ಕೂಟಕ್ಕೆ ಶಿವಸ್ವಾಮಿ ಬದಲಿಗೆ ಡಾ. ಎಸ್.ಟಿ. ಸುರೇಶ್ ಅವರನ್ನು ನೇಮಿಸಲಾಗಿದೆ.

ಶಿವಕುಮಾರ್ ಅವರ ಕಿರಿಯ ಸಹೋದರ ಮತ್ತು ಬೆಂಗಳೂರು ಗ್ರಾಮಾಂತರದ ಮಾಜಿ ಸಂಸದ ಡಿಕೆ ಸುರೇಶ್ ಕೆಎಂಎಫ್ ಅಧ್ಯಕ್ಷ ಹುದ್ದೆಯನ್ನು ಬಯಸುತ್ತಿದ್ದರೆ, ಅವರ ಸೋದರ ಮಾವ ಮತ್ತು ಎಂಎಲ್‌ಸಿ ಎಸ್. ರವಿ ಅಪೆಕ್ಸ್ ಬ್ಯಾಂಕ್ ಮುಖ್ಯಸ್ಥ ಸ್ಥಾನಕ್ಕಾಗಿ ಹಾತೊರೆಯುತ್ತಿದ್ದಾರೆ. ಹೊಸ ನೇಮಕಗಳು ಕಾಂಗ್ರೆಸ್‌ನಲ್ಲಿ, ವಿಶೇಷವಾಗಿ ಅಹಿಂದ ನಾಯಕರಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ. ತುಳಿತಕ್ಕೊಳಗಾದ ಸಮುದಾಯಗಳಿಂದ ಬಂದ ಹೆಚ್ಚಿನ ಅಧಿಕಾರಿಗಳನ್ನು ತೆಗೆದುಹಾಕುತ್ತಿದ್ದು, ಅವರ ಬದಲಿಗೆ ಒಕ್ಕಲಿಗ ಸಮುದಾಯದವರನ್ನು ನೇಮಿಸಲಾಗುತ್ತಿದೆ. ಈ ನಡೆಯ ಮೂಲಕ, ಒಕ್ಕಲಿಗ ಸಮುದಾಯದವರಾದ ಶಿವಕುಮಾರ್, ಜೆಡಿಎಸ್ ವರಿಷ್ಠ ಮತ್ತು ಮಾಜಿ ಪ್ರಧಾನಿ ಪ್ರಧಾನಿ ಎಚ್.ಡಿ. ದೇವೇಗೌಡರಿಗೆ ತಾವೇ ಪರ್ಯಾಯ ನಾಯಕ ಎಂಬುದನ್ನು ಸಮುದಾಯಕ್ಕೆ ಮನವರಿಕೆ ಮಾಡಿಕೊಡಲು ಪ್ರಯತ್ನಿಸುತ್ತಿದ್ದಾರೆ. ಪಕ್ಷದ ಭವಿಷ್ಯದ ಮೇಲೆ ನಕಾರಾತ್ಮಕ ಪರಿಣಾಮ ಬೀರಬಹುದು ಎಂದು ಮೂಲಗಳು ತಿಳಿಸಿವೆ.

## ಬೆಂಗಳೂರಿನಲ್ಲಿ ಜಾಗತಿಕ ಮಟ್ಟದ ಪ್ರತಿಭೆಗಳಿದ್ದರೂ ಆಡಳಿತ ಕಳಪೆ: ತೇಜಸ್ವಿ ಸೂರ್ಯ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ನಗರದಲ್ಲಿ ಜಾಗತಿಕ ಮಟ್ಟದ ತಂತ್ರಜ್ಞಾನ ಪ್ರತಿಭೆಗಳಿವೆ, ಆದರೆ ಇಲ್ಲಿನ ಆಡಳಿತ ಮಾತ್ರ ತೀರಾ ಕಳಪೆಯಾಗಿದೆ' ಎಂದು ಸಂಸದ ತೇಜಸ್ವಿ ಸೂರ್ಯ ವಾಗ್ದಾಳಿ ನಡೆಸಿದ್ದಾರೆ. ಕಬ್ಬನ್ ಪಾರ್ಕ್ ನಿಲ್ದಾಣದ ಹತ್ತಿರ ಸಂಜೆ 6 ಗಂಟೆಗೆ ನಮ್ಮ ಮೆಟ್ರೊ ರೈಲಿನಲ್ಲಿ ತಾಂತ್ರಿಕ ದೋಷ ಕಾಣಿಸಿಕೊಂಡಿತ್ತು. ಇಂದಿರಾನಗರದಿಂದ ಮೆಜೆಸ್ಟಿಕ್‌ವರೆಗೆ ದಿಢೀರನೆ ಮೆಟ್ರೊ ಸಂಚಾರ ಸ್ಥಗಿತಗೊಂಡಿತು. ಇದರಿಂದಾಗಿ ಸಾವಿರಾರು ಪ್ರಯಾಣಿಕರು ಪರದಾಡಿದ್ದರು.

ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಹಂಚಿಕೊಂಡಿರುವ ತೇಜಸ್ವಿ ಸೂರ್ಯ, 'ಬೆಂಗಳೂರಿನಲ್ಲಿ ಜಾಗತಿಕ ಮಟ್ಟದ ಪ್ರತಿಭೆಗಳಿದ್ದಾರೆ. ಆದರೆ ಇಲ್ಲಿನ ಆಡಳಿತ ಮಾತ್ರ ತೀರಾ ಕಳಪೆಯಾಗಿದೆ.

ಇದೇ ಭಾರತದ ಸಿಲಿಕಾನ್ ವ್ಯಾಲಿ ಕಥೆ. ಇತ್ತೀಚೆಗೆ ಬೆಂಗಳೂರಿನಲ್ಲಿ ಮೆಟ್ರೊ ರೈಲುಗಳು ಪದೇ ಪದೇ ಕೈಕೊಡುತ್ತಿರುವುದು ಪ್ರಯಾಣಿಕರ ಆತಂಕಕ್ಕೆ ಕಾರಣವಾಗಿದೆ. ಮೆಟ್ರೊ ಸಂಚಾರ ಸ್ಥಗಿತಗೊಂಡರೆ ಇಡೀ ನಗರ ಅವ್ಯವಸ್ಥೆಗೆ ಸಿಲುಕುತ್ತದೆ. ಈ ವೇಳೆ ಆಟೊ, ಕ್ಯಾಬ್‌ಗಳು ಸಿಗುವುದಿಲ್ಲ. ಈ ಸಮಸ್ಯೆಗೆ ಸರ್ಕಾರ ಯಾವುದೇ ಪರ್ಯಾಯ ಸಾರಿಗೆ ವ್ಯವಸ್ಥೆಯನ್ನೂ ಕಲ್ಪಿಸುವುದಿಲ್ಲ' ಎಂದಿದ್ದಾರೆ.

ಕೆಲಸ ಮುಗಿಸಿ ಮನೆಗೆ ಹೊರಡುವ ವೃತ್ತಿಪರರು ಮೆಟ್ರೊ ರೈಲಿನ ತಾಂತ್ರಿಕ ಸಮಸ್ಯೆಯಿಂದ ಟ್ರಕ್, ಲಾರಿ ಹತ್ತಬೇಕಾಯಿತು.

## ಕೆಂಪೇಗೌಡರ ಆದರ್ಶಗಳು ಇಂದಿಗೂ ಪ್ರಸ್ತುತ




• ಉದಯವಾಹಿನಿ, ಬೆಂಗಳೂರು

ಪಟ್ಟಣದ ಒಕ್ಕಲಿಗರ ಸಂಘದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ನಾಡಪ್ರಭು ಶ್ರೀಕೆಂಪೇಗೌಡರ 517ನೇ ಜಯಂತಿ ಉತ್ಸವ ಕಾರ್ಯಕ್ರಮವು ಅತ್ಯಂತ ಅದ್ದೂರಿಯಾಗಿ ಜರುಗಿತು. ಕಲಾತಂಡಗಳ ವೈಭವ ಹಾಗೂ ನೂರಾರು ಸಾರ್ವಜನಿಕರ ಸಮ್ಮುಖದಲ್ಲಿ ನಡೆದ ಈ ಉತ್ಸವವು ಪಟ್ಟಣದಾದ್ಯಂತ ಕಣ್ಮನ ಸೆಳೆಯಿತು. ಪಟ್ಟಣದ ಪ್ರಸಿದ್ಧ ಗುರಪ್ಪನ ಮಠದ ಶ್ರೀ ಓಂಕಾರೇಶ್ವರ ಸ್ವಾಮಿ ದೇವಾಲಯದ ಆವರಣದಲ್ಲಿ ನಾಡಪ್ರಭು ಕೆಂಪೇಗೌಡರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ, ಪುಷ್ಪ ನಮನ ಮುಖೇನ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಬಳಿಕ, ಅಲಂಕೃತಗೊಂಡ ಎತ್ತುಗಳ ಪಲ್ಲಕ್ಕಿಯಲ್ಲಿ ನಾಡಪ್ರಭು ಕೆಂಪೇಗೌಡರ ಭವ್ಯ ಪ್ರತಿಮೆಯನ್ನು ಪ್ರತಿಷ್ಠಾಪಿಸಿ ಪಟ್ಟಣದ ಮುಖ್ಯ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಯಿತು. ಮೆರವಣಿಗೆಯುದ್ದಕ್ಕೂ ಜಾನಪದ ಕಲಾತಂಡಗಳಾದ ವೀರಗಾಸೆ, ಡೊಳ್ಳು ಕುಣಿತ, ತಮಟೆ ವಾದ್ಯ, ಪಟದ ನೃತ್ಯ ಹಾಗೂ ಗಾರುಡಿ ಗೊಂಬೆಗಳ ಪ್ರದರ್ಶನ ಸಾರ್ವಜನಿಕರ ಆಕರ್ಷಣೆಯ ಕೇಂದ್ರಬಿಂದುವಾಗಿದ್ದವು.

ನೂರಾರು ಅನುಯಾಯಿಗಳು ಹಾಗೂ ಮುಖಂಡರು ಮೆರವಣಿಗೆಯಲ್ಲಿ ಉತ್ಸಾಹದಿಂದ ಪಾಲ್ಗೊಂಡಿದ್ದರು.

# ಐಟಿ ತಂತ್ರಜ್ಞಾನ ಬಳಸಿ ಜನಸ್ನೇಹಿ ಪೊಲೀಸ್ ವ್ಯವಸ್ಥೆ ನಿರ್ಮಿಸಿ

### ರಾಜ್ಯದಲ್ಲಿ ಅಪರಾಧ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ತಾಂತ್ರಿಕ ಸಾಮರ್ಥ್ಯವನ್ನು ಮತ್ತಷ್ಟು ವೃದ್ಧಿಸಬೇಕಾಗಿದೆ.

• ಉದಯವಾಹಿನಿ,ಬೆಂಗಳೂರು

ಮಾಹಿತಿ ತಂತ್ರಜ್ಞಾನ ಯನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ಪೊಲೀಸ್ ಸೇವೆಗಳನ್ನು ಮತ್ತಷ್ಟು ಪಾರದರ್ಶಕ, ದಕ್ಷ ಹಾಗೂ ಜನಸ್ನೇಹಿಯನ್ನಾಗಿ ರೂಪಿಸಬೇಕು ಎಂದು ರಾಜ್ಯದ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ಕೇಂದ್ರ, ತಂತ್ರಜ್ಞಾನ ಮತ್ತು ಮಾಹಿತಿ ತಂತ್ರಜ್ಞಾನ ವಿಭಾಗವಾದ ಪೊಲೀಸ್ ಕಂಪ್ಯೂಟರ್ ವಿಂಗ್‌ಗೆ ಭೇಟಿ ನೀಡಿದ ಅವರು, ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಇಲಾಖೆಯ ಕಾರ್ಯವೈಖರಿ ಕುರಿತು ಸಮಗ್ರ ಪರಿಶೀಲನಾ ಸಭೆ ನಡೆಸಿದರು.

ಸಭೆಯಲ್ಲಿ ಮಾತನಾಡಿದ ಸಚಿವರು, ರಾಜ್ಯದಲ್ಲಿ ಅಪರಾಧ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ತಾಂತ್ರಿಕ ಸಾಮರ್ಥ್ಯವನ್ನು ಮತ್ತಷ್ಟು ವೃದ್ಧಿಸಬೇಕಾಗಿದೆ. ಆಧುನಿಕ ತಂತ್ರಜ್ಞಾನ ಅಳವಡಿಸಿಕೊಂಡು ಸಾರ್ವಜನಿಕರಿಗೆ ತ್ವರಿತ ಸೇವೆ ಒದಗಿಸಲು ಆದ್ಯತೆ ನೀಡಬೇಕು ಎಂದು ನಿರ್ದೇಶನ ನೀಡಿದರು.

ಇದರ ಜೊತೆಗೆ, ಪೊಲೀಸ್ ಇಲಾಖೆಯ ಡಿಜಿಟಲ್ ಸೇವೆಗಳು ಮತ್ತು ಮಾಹಿತಿ ವ್ಯವಸ್ಥೆಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ರೂಪಿಸುವ ಮೂಲಕ ಆಡಳಿತದಲ್ಲಿ ಪಾರದರ್ಶಕತೆ ಹಾಗೂ ಹೊಣೆಗಾರಿಕೆಯನ್ನು ಹೆಚ್ಚಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಸಭೆಯಲ್ಲಿ ರಾಜ್ಯದ ಡಿಜಿಟಲ್ ಪೊಲೀಸ್ ವ್ಯವಸ್ಥೆಯ ಪ್ರಮುಖ ತಾಂತ್ರಿಕ ಮೂಲಸೌಕರ್ಯಗಳ ಕಾರ್ಯನಿರ್ವಹಣೆ ಕುರಿತು ಸವಿಸ್ತಾರವಾಗಿ ಚರ್ಚೆ ನಡೆಯಿತು.

ರಾಜ್ಯ ಪೊಲೀಸ್ ಡೇಟಾ ಸೆಂಟರ್, ಕ್ರೈಮ್ ಅಂಡ್ ಕ್ರಿಮಿನಲ್ ಟ್ರ್ಯಾಕಿಂಗ್ ನೆಟ್‌ವರ್ಕ್ ಅಂಡ್ ಸಿಸ್ಟಮ್ಸ್,ಸೈಬರ್ ಕಮಾಂಡ್ ಸೆಂಟರ್, ಸೈಬರ್ ಎಮರ್ಜೆನ್ಸಿ ನೆಟ್‌ವರ್ಕ್ ಘಟಕಗಳು, ಸಾರ್ವಜನಿಕ ಸೇವೆಗಾಗಿ ಅಭಿವೃದ್ಧಿಪಡಿಸಿರುವ ಕೆಎಸ್‌ಪಿ ಆ್ಯಪ್ ಹಾಗೂ ಸ್ಮಾರ್ಟ್ ಇ-ಬೀಟ್ ಸೇರಿದಂತೆ ವಿವಿಧ ಡಿಜಿಟಲ್ ವೇದಿಕೆಗಳ ಕಾರ್ಯಕ್ಷಮತೆಯನ್ನು ಪರಿಶೀಲಿಸಲಾಯಿತು.




ಉದಯವಾಹಿನಿ ಚಿತ್ರ

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ಪ್ರಮುಖ ಎಂಟರ್ ಪ್ರೈಸ್ ರಿಸೋರ್ಸ್ ಪ್ಲಾನಿಂಗ್ ವೇದಿಕೆಯಾದ ಯೋಜನೆಯನ್ನು ಮತ್ತಷ್ಟು ಅಭಿವೃದ್ಧಿಪಡಿಸುವ ಕುರಿತೂ ಸಭೆಯಲ್ಲಿ ಚರ್ಚಿಸಲಾಯಿತು. ಅಪರಾಧ ದಾಖಲೆಗಳ ನಿರ್ವಹಣೆ, ಸಂಚಾರ ವ್ಯವಸ್ಥೆ, ಇಲಾಖೆಯ ಆಡಳಿತ ಮತ್ತು ಇತರೆ ಸೇವೆಗಳನ್ನು ಏಕೀಕರಿಸುವ ಈ ವೇದಿಕೆಯನ್ನು ಇನ್ನಷ್ಟು ಆಧುನೀಕರಿಸುವ ಬಗ್ಗೆ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಲಾಯಿತು. ಈ ವೇಳೆ ಜನರಿಗೆ ತ್ವರಿತ, ಪಾರದರ್ಶಕ ಹಾಗೂ ಗುಣಮಟ್ಟದ ಸೇವೆ ನೀಡುವ ನಿಟ್ಟಿನಲ್ಲಿ ತಂತ್ರಜ್ಞಾನದ ಪರಿಣಾಮಕಾರಿ ಬಳಕೆಗೆ ಸರ್ಕಾರ ಆದ್ಯತೆ ನೀಡಲಿದೆ ಎಂದು ಸಚಿವರು ತಿಳಿಸಿದರು.

> **ಪೊಲೀಸ್ ಇಲಾಖೆಯ ಡಿಜಿಟಲ್ ವ್ಯವಸ್ಥೆಯನ್ನು ಆಧುನೀಕರಿಸುವುದು, ಸೈಬರ್ ಭದ್ರತೆಯನ್ನು ಮತ್ತಷ್ಟು ಬಲಪಡಿಸುವುದು, ವಿವಿಧ ಡಿಜಿಟಲ್ ವ್ಯವಸ್ಥೆಗಳ ನಡುವೆ ಸಮನ್ವಯ ಹೆಚ್ಚಿಸುವುದು ಹಾಗೂ ಪೊಲೀಸ್ ಕಾರ್ಯಾಚರಣೆಗಾಗಿ ಏಕೀಕೃತ ಡಿಜಿಟಲ್ ವ್ಯವಸ್ಥೆ ರೂಪಿಸುವ ಕುರಿತು ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು.-ಸಚಿವ ಪ್ರಿಯಾಂಕ್ ಖರ್ಗೆ**

**ಗೃಹ ಇಲಾಖೆಯ 100 ದಿನಗಳ ಕಾರ್ಯಯೋಜನೆಯ ಭಾಗವಾಗಿ ಕರ್ನಾಟಕದಲ್ಲಿ ಸ್ಮಾರ್ಟ್, ತಂತ್ರಜ್ಞಾನ ಆಧಾರಿತ ಹಾಗೂ ಬುದ್ಧಿವಂತ ಪೊಲೀಸ್ ವ್ಯವಸ್ಥೆ ರೂಪಿಸಲು ಕೈಗೊಳ್ಳಬೇಕಾದ ತ್ವರಿತ ಮತ್ತು ಪರಿಣಾಮಕಾರಿ ಕ್ರಮಗಳ ಕುರಿತು ಕೂಡ ಸಭೆಯಲ್ಲಿ ಸಮಾಲೋಚನೆ ನಡೆಯಿತು.**

**ತ್ವರಿತ ಮತ್ತು ಪರಿಣಾಮಕಾರಿ ಕ್ರಮಗಳ ಕುರಿತು ಚರ್ಚೆ**




### ರಾಷ್ಟ್ರೀಯ ಭದ್ರತೆ ವಿಚಾರದಲ್ಲಿ ನಾವು ಕೇಂದ್ರದ ಪರ: ಗೃಹ ಸಚಿವ ಪ್ರಿಯಾಂಕ್ ಖರ್ಗೆ

**1 ಡಿಜಿಟಲ್ ಪೊಲೀಸ್ ವ್ಯವಸ್ಥೆ**
**2 ಪೊಲೀಸ್ ಡೇಟಾ ಸೆಂಟರ್**
**3 ಕ್ರಿಮಿನಲ್ ಟ್ರ್ಯಾಕಿಂಗ್ ನೆಟ್‌ವರ್ಕ್**

ರಾಜ್ಯವನ್ನು ಸ್ಲೀಪರ್ ಸೆಲ್ ಆಗಲು ಬಿಡುವುದಿಲ್ಲ.

ರಾಷ್ಟ್ರೀಯ ಭದ್ರತೆ ವಿಚಾರ ಬಂದಾಗ ಒಕ್ಕೂಟ ಸರ್ಕಾರದ ಪರ ಇರುತ್ತದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.

ದಾವಣಗೆರೆ ಯುವಕ ಅಯೋಧ್ಯೆ ಸ್ಫೋಟದ ಕುರಿತು ಹೇಳಿಕೆ ನೀಡಿದ್ದ ಪ್ರಕರಣ ಸಂಬಂಧ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಮಾಹಿತಿ ಬಂದ ಕೂಡಲೇ ಆತನನ್ನು ವಶಕ್ಕೆ ಪಡೆದು ವಾಟ್ಸ್‌ಆಪ್ ಚಾಟ್ ಪರಿಶೀಲಿಸಿದ್ದೇವೆ.

ಎನ್‌ಐಎ ವಿಚಾರಣೆ ಮಾಡಿದೆ. ಇದು ನಮ್ಮ ವ್ಯಾಪ್ತಿ ಮೀರಿದ ವಿಚಾರ. ಹೀಗಾಗಿ ಎನ್‌ಐಎ ನಿರ್ದೇಶನದಂತೆ ಎಲ್ಲವೂ ನಡೆಯಲಿದೆ. ದಾವಣಗೆರೆಯಲ್ಲಿ ಬಂಧಿಯಾದವನಾಗಲೀ ಇನ್ಯಾರೇ ಆಗಲೀ ಕರ್ನಾಟಕದವರಲ್ಲ, ಕನ್ನಡಿಗರಲ್ಲ ಎಂದರು. ನಮ್ಮಲ್ಲಿ ಹೆಚ್ಚು ಉದ್ಯೋಗಾವಕಾಶ ಕಲ್ಪಿಸುತ್ತೇವೆಂಬ ಕಾರಣಕ್ಕೆ ಉತ್ತರ ಪ್ರದೇಶ, ಮಧ್ಯಪ್ರದೇಶ ಸೇರಿ ಹಲವೆಡೆಯಿಂದ ಬಂದವರು.

ಇಂತಹ ಚಟುವಟಿಕೆಯಲ್ಲಿ ಭಾಗಿಯಾಗುತ್ತಾರೆಂಬುದು ಗೊತ್ತಾಗುವುದಿಲ್ಲ. ಸುಳಿವು ಸಹ ಸಿಗುವುದಿಲ್ಲ ಎಂದರು.2017ರಲ್ಲಿ ನಾನು ಪ್ರವಾಸೋದ್ಯಮ ಸಚಿವನಿದ್ದಾಗಲೇ ಮಾರ್ಗಸೂಚಿ ಹೊರಡಿಸಿದ್ದೆ. ಮುತ್ತತಿ ಸೇರಿ ಯಾವುದೇ ಪ್ರವಾಸಿ ತಾಣಗಳಲ್ಲಿ ಸೆಲ್ಫಿ, ರೀಲ್ಸ್ ಹೆಸರಿನಲ್ಲಿ ಹುಚ್ಚಾಟ ಸಲ್ಲ. ಸರ್ಕಾರದ ಮೇಲಷ್ಟೇ ಹೇಳುವುದಲ್ಲ. ಎಲ್ಲರಿಗೂ ಜವಾಬ್ದಾರಿ ಅಗತ್ಯ ಎಂದರು.

## ಅಧಿಕಾರಿಗಳಿಗೆ ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ

## ರಾಜ್ಯದ 97 ಕ್ಷೇತ್ರಗಳ ಮೇಲೆ ಬಿಜೆಪಿ ಕಣ್ಣು, ಎಸ್ ಐಆರ್ ಮೂಲಕ ಕಾಂಗ್ರೆಸ್ ಮತದಾರರ ಹೆಸರು ಅಳಿಸಲು ಸಂಚು: ಎಂ.ಬಿ. ಪಾಟೀಲ್ ಆರೋಪ..!

• ಉದಯವಾಹಿನಿ, ಬೆಂಗಳೂರು

ವಿಶೇಷ ಮತದಾರರ ಪಟ್ಟಿಯ ತೀವ್ರ ಪರಿಷ್ಕರಣೆ ಪ್ರಕ್ರಿಯೆಯನ್ನು ಬಳಸಿಕೊಂಡು ಬಿಜೆಪಿ ರಾಜ್ಯದ 97 ವಿಧಾನಸಭಾ ಕ್ಷೇತ್ರಗಳನ್ನು ಗುರಿಯಾಗಿಸಿಕೊಂಡಿದೆ ಎಂದು ಸಚಿವ ಎಂ.ಬಿ. ಪಾಟೀಲ್ ಆರೋಪಿಸಿದ್ದಾರೆ. ವಿಜಯಪುರ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಆಯೋಜಿಸಿದ್ದ ಕಾಂಗ್ರೆಸ್‌ಬೂತ್ ಮಟ್ಟದ ಏಜೆಂಟರ (ತರಬೇತಿ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ವಿಜಯಪುರ ನಗರ ಹಾಗೂ ಬಬಲೇಶ್ವರ ಸೇರಿದಂತೆ ಒಟ್ಟು 97 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಬೆಂಬಲಿಗರ ಹೆಸರನ್ನು ಮತದಾರರ ಪಟ್ಟಿಯಿಂದ ಕೈಬಿಡುವ ಸಂಚು ನಡೆಯುತ್ತಿದೆ ಎಂದು ಆರೋಪಿಸಿದರು.

ಇದೇ ರೀತಿಯ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯನ್ನು ಬಿಜೆಪಿ ಆಡಳಿತದ ಇತರ ರಾಜ್ಯಗಳಲ್ಲೂ ಅನುಸರಿಸಲಾಗಿದೆ.

ಕರ್ನಾಟಕದಲ್ಲೂ ಕಾಂಗ್ರೆಸ್ ಪರ ಮತದಾರರ ಹೆಸರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲು ಪ್ರಯತ್ನ ನಡೆಯುತ್ತಿದೆ ಎಂದು ದೂರಿದರು. ಮತದಾರರ ಪಟ್ಟಿಯಿಂದ ಹೆಸರು ಕೈಬಿಟ್ಟರೆ ಭವಿಷ್ಯದಲ್ಲಿ ಮತದಾನದ ಹಕ್ಕು ಕಳೆದುಕೊಳ್ಳುವುದಷ್ಟೇ ಅಲ್ಲ, ಸರ್ಕಾರದ ವಿವಿಧ ಕಲ್ಯಾಣ ಯೋಜನೆಗಳ ಸೌಲಭ್ಯ ಪಡೆಯುವುದಕ್ಕೂ ಸಮಸ್ಯೆಯಾಗುವ ಸಾಧ್ಯತೆ ಇದೆ.

ಗ್ಯಾರಂಟಿ ಯೋಜನೆಗಳು, ಪಡಿತರ ವಿತರಣೆ ಹಾಗೂ ಸಾಮಾಜಿಕ ಭದ್ರತಾ ಪಿಂಚಣಿ ಸೇರಿದಂತೆ ಹಲವು ಸರ್ಕಾರಿ ಸೇವೆಗಳ ಮೇಲೂ ಇದರ ಪರಿಣಾಮ ಬೀಳಬಹುದು ಎಂದು ಎಚ್ಚರಿಸಿದರು.



ಉದಯವಾಹಿನಿ ಚಿತ್ರ

> **ಈ ವಿಚಾರವನ್ನು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ (ಕೆಪಿಸಿಸಿ) ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು, ಪಕ್ಷದ ಕಾರ್ಯಕರ್ತರು ಹಾಗೂ ಬೂತ್ ಮಟ್ಟದ ಏಜೆಂಟರು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು. ಯಾವುದೇ ಅರ್ಹ ಮತದಾರರ ಹೆಸರು ಪಟ್ಟಿಯಿಂದ ಕೈಬಿಡದಂತೆ ನಿಗಾ ವಹಿಸಬೇಕೆಂದು ಸೂಚಿಸಿದರು.**
> **-ಎಂ.ಬಿ. ಪಾಟೀಲ್**

## ಪ್ರದೀಪ್ ಈಶ್ವರ್ ಮೇಲೆ ಚಪ್ಪಲಿ ಎಸೆತ: ಹೇಯ, ಹೇಡಿತನದ ಕೃತ್ಯ - ಬಿಕೆ ಹರಿಪ್ರಸಾದ್ ಖಂಡನೆ!

### ಜನರ ತೀರ್ಪಿಗೆ ಗೌರವ ಕೊಡುವ ಪ್ರಜಾಪ್ರಭುತ್ವದಲ್ಲಿ ಇಂತಹ ದುಷ್ಕೃತ್ಯಗಳಿಗೆ ಯಾವುದೇ ಸಮರ್ಥನೆ ಇಲ್ಲ

• ಉದಯವಾಹಿನಿ, ಬೆಂಗಳೂರು

ಚಿಕ್ಕಬಳ್ಳಾಪುರದಲ್ಲಿ ನಡೆದ ಕೆಂಪೇಗೌಡ ಜಯಂತಿ ಆಚರಣೆ ವೇಳೆ ಶಾಸಕ ಪ್ರದೀಪ್ ಈಶ್ವರ್ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಜೆಡಿಎಸ್ ಹಾಗೂ ಸುಧಾಕರ್ ಬೆಂಬಲಿಗರು ಬಿಟ್ಟಿಲ್ಲ. ವೇದಿಕೆ ಒಳಗೆ ಹಾಗೂ ಹೊರಗೆ ಗಲಾಟೆ ಮಾಡುವ ಮೂಲಕ ಪ್ರದೀಪ್ ಈಶ್ವರ್ ಅವರನ್ನು ಅಲ್ಲಿಂದ ಕಳುಹಿಸಿದ್ದಾರೆ. ಹೊರಗಡೆ ಪ್ರದೀಪ್ ಈಶ್ವರ್ ಮೇಲೆ ಚಪ್ಪಲಿ ಎಸೆತ ಪ್ರಯತ್ನ ನಡೆಸಲಾಗಿದೆ. ಆದರೆ ಅದು ಪೊಲೀಸ್ ಅಧಿಕಾರಿ ಮೇಲೆ ಬಿದ್ದಿದೆ. ಈ ಘಟನೆಯನ್ನು ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ಖಂಡಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಅವರು ಪೋಸ್ಟ್ ಮಾಡಿದ್ದು, ಸಾರ್ವಜನಿಕವಾಗಿ ವಿರೋಧ ಪಕ್ಷದವರು ಚಪ್ಪಲಿ ಎಸೆದು ನಡೆಸಿರುವ ಕೃತ್ಯವನ್ನು ತೀವ್ರವಾಗಿ ಖಂಡಿಸುತ್ತೇನೆ ಎಂದಿದ್ದಾರೆ.



ಉದಯವಾಹಿನಿ ಚಿತ್ರ

ರಾಜಕೀಯದಲ್ಲಿ ಭಿನ್ನಾಭಿಪ್ರಾಯಗಳು ಸಹಜ. ಆದರೆ ವಾದದಿಂದ ಎದುರಿಸಲಾಗದವರು, ಪ್ರಜಾಪ್ರಭುತ್ವದ ಭಾಷೆಯಲ್ಲಿ ಉತ್ತರಿಸಲು ಸಾಧ್ಯವಾಗದವರು ಮಾತ್ರ ಇಂತಹ ಹೇಯ ಮತ್ತು ಹೇಡಿತನದ ಕೃತ್ಯಗಳಿಗೆ ಇಳಿಯುತ್ತಾರೆ ಎಂದಿದ್ದಾರೆ.

ಭಿನ್ನಮತವನ್ನು ಹಿಂಸೆ, ಬೆದರಿಕೆ ಮತ್ತು ಅವಮಾನದಿಂದ ಹತ್ತಿಕ್ಕಲು ಹೊರಟಿರುವ ರಾಜಕೀಯ ಸಂಸ್ಕೃತಿಗೆ ಕರ್ನಾಟಕದಲ್ಲಿ ಯಾವುದೇ ಸ್ಥಾನವಿಲ್ಲ. ಜನರ ತೀರ್ಪಿಗೆ ಗೌರವ ಕೊಡುವ ಪ್ರಜಾಪ್ರಭುತ್ವದಲ್ಲಿ ಇಂತಹ ದುಷ್ಕೃತ್ಯಗಳಿಗೆ ಯಾವುದೇ ಸಮರ್ಥನೆ ಇಲ್ಲ ಎಂದು ಕಿಡಿಕಾರಿದ್ದಾರೆ.

ಪ್ರದೀಪ್ ಈಶ್ವರ್ ಅವರು ಎದೆಗುಂದಬೇಕಿಲ್ಲ. ಕಾಂಗ್ರೆಸ್ ಪಕ್ಷ ನಿಮ್ಮೊಂದಿಗೆ ದೃಢವಾಗಿ ನಿಂತಿದೆ.

ಸತ್ಯ, ಪ್ರಜಾಪ್ರಭುತ್ವ ಮತ್ತು ಜನರ ಪರವಾದ ಧ್ವನಿಯನ್ನು ಇಂತಹ ಕೃತ್ಯಗಳಿಂದ ಯಾರೂ ಮೌನಗೊಳಿಸಲು ಸಾಧ್ಯವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಆಸ್ತಿ ವಿಚಾರಕ್ಕೆ ಜಗಳ; ಪುತ್ರನ ಜತೆ ಸೇರಿ ಹೆತ್ತ ತಾಯಿಯನ್ನೇ ಕೊಲೆಗೈದ ಮಗಳು!

• ಉದಯವಾಹಿನಿ, ಬೆಂಗಳೂರು

ಕುಡಿತದ ಚಟಕ್ಕೆ ಒಳಗಾಗಿದ್ದ ಮಹಿಳೆಯೊಬ್ಬಳು ಆಸ್ತಿ ವಿಚಾರಕ್ಕೆ ನಡೆದ ಜಗಳದ ವೇಳೆ ತನ್ನ ಮಗನ ಜತೆ ಸೇರಿ ಹೆತ್ತ ತಾಯಿಯನ್ನೇ ಕೊಲೆ ಮಾಡಿದ ಆಘಾತಕಾರಿ ಘಟನೆ ಬೆಂಗಳೂರಿನ ಕೆಂಗೇರಿ ವ್ಯಾಪ್ತಿಯಲ್ಲಿ ನಡೆದಿದೆ. 75 ವರ್ಷದ ಜಯಮ್ಮ ಕೊಲೆಯಾದ ವೃದ್ಧೆ. ಪ್ರಕರಣಕ್ಕೆ ಸಂಬಂಧಿಸಿ ಮಗಳು ಭಾಗ್ಯಲಕ್ಷ್ಮಿ ಹಾಗೂ ಮೊಮ್ಮಗ ಕುಶಾಲ್‌ನನ್ನು ಪೊಲೀಸರು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ.

ಕೆಂಗೇರಿಯ ಸುಭಾಷ್ ನಗರದಲ್ಲಿ ಈ ಘಟನೆ ನಡೆದಿದೆ. ಭಾನುವಾರ ರಾತ್ರಿ ಕೊಲೆ ನಡೆದಿದ್ದರೂ ಪ್ರಕರಣ ತಡವಾಗಿ ಬೆಳಕಿಗೆ ಬಂದಿದೆ. ಕುಟುಂಬದ ಸದಸ್ಯರೆಲ್ಲರೂ ಕುಡಿತದ ಚಟಕ್ಕೆ ಒಳಗಾಗಿದ್ದರಿಂದ ಆಸ್ತಿ ಮಾರಾಟದ ವಿಚಾರವಾಗಿ ಹಲವು ದಿನಗಳಿಂದ ಜಗಳ ನಡೆಯುತ್ತಿತ್ತು.

ಘಟನೆ ನಡೆದ ರಾತ್ರಿ ಆಸ್ತಿ ಮಾರಾಟದ ಹಣದ ವಿಚಾರಕ್ಕೆ ಜಯಮ್ಮ ಆಕೆಯ ಮಗಳು ಭಾಗ್ಯಲಕ್ಷ್ಮಿ ನಡುವೆ ತೀವ್ರ ವಾಗ್ವಾದ ನಡೆದಿದೆ.

ಮಾತಿನ ಚಕಮಕಿ ಹೆಚ್ಚಾಗಿ ಜಗಳಕ್ಕೆ ತಿರುಗಿದೆ. ಈ ವೇಳೆ ಭಾಗ್ಯಲಕ್ಷ್ಮಿ ಅವರ ಮಗ ಕುಶಾಲ್ ಕೂಡ ಜಗಳಕ್ಕೆ ಸೇರಿಕೊಂಡಿದ್ದಾನೆ. ಈ ವೇಳೆ, ಮನೆಯಲ್ಲಿದ್ದ ಮುದ್ದೆ ಮಾಡುವ ಕೋಲಿನಿಂದ ಜಯಮ್ಮನ ತಲೆಗೆ ಬಲವಾಗಿ ಹೊಡೆದು ಹಲ್ಲೆ ನಡೆಸಿದ್ದು, ವೃದ್ಧೆ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

# ಸುರಂಗ ಮಾರ್ಗಕ್ಕೆ ಭೂಮಿ ಪೂಜೆ

### ಒಂದೊಂದು ಪಥಗಳು 3.5 ಮೀಟರ್ ಅಗಲವಿದ್ದು, ಒಟ್ಟು 1139 ಕೋಟಿ ರೂ. ವೆಚ್ಚದ ಯೋಜನೆ ಇದಾಗಿದೆ.

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಹೆಬ್ಬಾಳ ಜಂಕ್ಷನ್‌ನಿಂದ ಮೇಖ್ರಿ ವೃತ್ತದವರೆಗೂ ಸುರಂಗ ರಸ್ತೆ ನಿರ್ಮಾಣಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದು ಭೂಮಿ ಪೂಜೆ ನೆರವೇರಿಸಿದರು. ಹೆಬ್ಬಾಳ ಜಂಕ್ಷನ್‌ನಿಂದ ಯುಎಎಸ್ ಸಿಬ್ಬಂದಿ ವಸತಿಗೃಹಗಳ ವರೆಗೂ ಸುರಂಗ ರಸ್ತೆ ನಿರ್ಮಿಸಲಾಗುತ್ತಿದ್ದು, ಹೆಬ್ಬಾಳ ಜಂಕ್ಷನ್ ಬಳಿ ಈ ಸುರಂಗ ಮಾರ್ಗದ ನಿರ್ಮಾಣಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪೂಜೆ ನೆರವೇರಿಸಿದರು. ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣಬೈರೇಗೌಡ, ಇಂಧನ ಸಚಿವ ಕೆ.ಜೆ. ಜಾರ್ಜ್, ಸಾರಿಗೆ ಸಚಿವ ಬೈರತಿ ಸುರೇಶ್, ಬಿಡಿಎ ಅಧ್ಯಕ್ಷ ಎನ್.ಎ. ಹ್ಯಾರೀಸ್ ಸೇರಿದಂತೆ ಹಲವು ಗಣ್ಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಹೆಬ್ಬಾಳ ಜಂಕ್ಷನ್‌ನಿಂದ ಯುಎಎಸ್ ವರೆಗಿನ ಈ ಸುರಂಗ ಮಾರ್ಗ ಸುಮಾರು 2.2 ಕಿ.ಮೀ. ಉದ್ದವಿದ್ದು, 6 ಪಥಗಳ ರಸ್ತೆಯಾಗಿದೆ. ಒಂದೊಂದು ಪಥಗಳು 3.5 ಮೀಟರ್ ಅಗಲವಿದ್ದು, ಒಟ್ಟು 1139 ಕೋಟಿ ರೂ. ವೆಚ್ಚದ ಯೋಜನೆ ಇದಾಗಿದೆ. ಬಿಡಿಎಯಿಂದಲೇ ಈ ಸುರಂಗ ಮಾರ್ಗ ನಿರ್ಮಾಣವಾಗುತ್ತಿದೆ.

18 ತಿಂಗಳಲ್ಲಿ ಕಾಮಗಾರಿ ಪೂರ್ಣವಾಗಲಿದ್ದು, ಯಾವುದೇ ಖಾಸಗಿ ಜಾಗದ ಸ್ವಾಧೀನವಿಲ್ಲದೆ ಈ ಸುರಂಗ ಮಾರ್ಗವನ್ನು ನಿರ್ಮಿಸಲಾಗುತ್ತಿದೆ.

ಬೆಂಗಳೂರು ನಗರದ ಅಭಿವೃದ್ಧಿಗಾಗಿ 1 ಲಕ್ಷ ಕೋಟಿ ರೂಪಾಯಿಗೂ ಹೆಚ್ಚಿನ ಅಭಿವೃದ್ಧಿ ಯೋಜನೆಗಳನ್ನು ರೂಪಿಸಿದ್ದೇವೆ. ಬೆಂಗಳೂರಿನ ಜನತೆಗೆ ಏನೆಲ್ಲಾ ಒಳ್ಳೆಯ ಕೆಲಸ ಮಾಡಲು ಸಾಧ್ಯವೋ ಅದನ್ನೆಲ್ಲಾ ಮಾಡುತ್ತೇವೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸುರಂಗ ಮಾರ್ಗದ ಗುದ್ದಲಿ ಪೂಜೆ ಸಮಾರಂಭದಲ್ಲಿ ಮಾತನಾಡುತ್ತಾ ಹೇಳಿದರು.

ನಾನು ಮುಖ್ಯಮಂತ್ರಿಯಾದ ಮೇಲೆ 10 ಸಾವಿರ ಕೋಟಿ ರೂಪಾಯಿ ಲೂಟಿ ಮಾಡಿದ್ದೇನೆ ಎಂದೆಲ್ಲಾ ವಿರೋಧ ಪಕ್ಷಗಳು ಆರೋಪ ಮಾಡುತ್ತಿವೆ. ಈ ಟೀಕೆಗಳೇ ನನಗೆ ಉನ್ನತ ಕಾರ್ಯಕ್ರಮ ರೂಪಿಸಲು ಮಾರ್ಗದರ್ಶನ ಮಾಡುತ್ತವೆ ಎಂದರು.



ಮಾತನಾಡಿದ ನಗರಾಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ಅವರು, ಬೆಂಗಳೂರಿನಲ್ಲಿ ಮುಂದಿನ 50 ವರ್ಷದ ಸಂಚಾರ ದಟ್ಟಣೆಯನ್ನು ಗಮನದಲ್ಲಿಟ್ಟುಕೊಂಡು ಯೋಜನೆಗಳನ್ನು ರೂಪಿಸುತ್ತಿದ್ದೇವೆ. ಇಂದು ಹೆಬ್ಬಾಳ ಜಂಕ್ಷನ್‌ನಲ್ಲಿ ಸುರಂಗ ಮಾರ್ಗದ ಶಂಕುಸ್ಥಾಪನೆ ನೆರವೇರಿಸಿದ್ದೇವೆ.

ಇದು ಬೆಂಗಳೂರು ಸಂಚಾರ ಸಮಸ್ಯೆಯ ಪರಿಹಾರಕ್ಕೆ ದೂರದೃಷ್ಟಿಯ ಯೋಜನೆಯಾಗಿದೆ. ಸತತ 2 ವರ್ಷದ ಪ್ರಯತ್ನದ ಫಲ ಇಂದು ಶಂಕುಸ್ಥಾಪನೆಯಾಗಿದೆ.

10 ವರ್ಷದ ಹಿಂದೆಯೇ ನಗರಾಭಿವೃದ್ಧಿ ಸಚಿವರಾಗಿದ್ದ ಕೆ.ಜೆ. ಜಾರ್ಜ್ ಅವರು ಈ ಯೋಜನೆ ರೂಪಿಸಿದ್ದರು.

> **ಅಧಿಕಾರ ಸಿಕ್ಕಾಗ ಜನಪರ ಕೆಲಸ ಮಾಡಬೇಕು. ಅಭಿವೃದ್ಧಿ ಕೆಲಸ ಮಾಡೋಕೆ ವಿರೋಧ ಪಕ್ಷದ ಸ್ನೇಹಿತರಿಂದ ಆಗಿಲ್ಲ. ಈಗ ಟೀಕೆಗಳನ್ನು ಮಾಡುತ್ತಿದ್ದಾರೆ ಅಷ್ಟೇ ಎಂದರು. ಹೆಬ್ಬಾಳ ಜಂಕ್ಷನ್‌ನಿಂದ ಮೇಖ್ರಿ ವೃತ್ತದವರೆಗೂ ನಿರ್ಮಾಣವಾಗುವ ಸುರಂಗ ಮಾರ್ಗ ಸುಂಕ ರಹಿತ ಮಾರ್ಗವಾಗಿದೆ ಎಂದು ಅವರು ಹೇಳಿದರು.-ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್**

### ಸಂಚಾರ ದಟ್ಟಣ ಸಮಸ್ಯೆ ಪರಿಹಾರ

ಬಿಡಿಎ ಅಧ್ಯಕ್ಷರಾದ ಎನ್.ಎ. ಹ್ಯಾರೀಸ್, ಬಿಡಿಎ ಆಯುಕ್ತರು, ಜಿಬಿಎ ಆಯುಕ್ತರು ಎಲ್ಲರೂ ಈ ಯೋಜನೆ ಕಾರ್ಯಸಾಧುವಾಗಲು ಕಾರಣರಾಗಿದ್ದಾರೆ. 10 ವರ್ಷದ ಹಿಂದೆಯೇ ಈ ಯೋಜನೆ ಜಾರಿಯಾಗಿದ್ದರೆ ಸಂಚಾರ ದಟ್ಟಣ ಸಮಸ್ಯೆ ಪರಿಹಾರವಾಗುತ್ತಿತ್ತು. ಅಭಿವೃದ್ಧಿ ವಿರೋಧಿಗಳ ಕುತಂತ್ರದಿಂದ ಇಷ್ಟು ವರ್ಷ ಕಾಯಬೇಕಾಯಿತು ಎಂದರು.

# ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮಕ್ಕೆ ವಿಧಾನ ಪರಿಷತ್ ಶಾಸಕ ಕೆ.ಎಸ್.ನವೀನ್ ಚಾಲನೆ

## ಹಸುಗೂಸಿನಿಂದ ಹಿಡಿದು ಐದು ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ತಪ್ಪದೇ ಎರಡು ಹನಿ ಪೋಲಿಯೊ ಲಸಿಕೆ ಹಾಕಿಸಬೇಕು

• **ಉದಯವಾಹಿನಿ ಚಿತ್ರದುರ್ಗ:**

ದೇಶದಲ್ಲಿ ಪೋಲಿಯೊ ಮುಕ್ತ ವಾತಾವರಣ ನಿರ್ಮಿಸುವ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜಂಟಿಯಾಗಿ ಹಮ್ಮಿಕೊಳ್ಳುತ್ತಿರುವ ಪಲ್ಸ್ ಪೋಲಿಯೊ ಅಭಿಯಾನವು ಮಕ್ಕಳ ಭವಿಷ್ಯದ ದೃಷ್ಟಿಯಿಂದ ಅತ್ಯಂತ ನಿರ್ಣಾಯಕವಾಗಿದೆ ಎಂದು ವಿಧಾನ ಪರಿಷತ್ ಶಾಸಕ ಕೆ.ಎಸ್.ನವೀನ್ ತಿಳಿಸಿದರು.

ನಗರದ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ಭಾನುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ರಾಷ್ಟ್ರೀಯ ಪಲ್ಸ್ ಪೋಲಿಯೊಲಸಿಕಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರತಿ ವರ್ಷ ಹಮ್ಮಿಕೊಳ್ಳುವ ಈ ಬೃಹತ್ ಲಸಿಕಾ ಅಭಿಯಾನದ ಮೂಲಕ ಹುಟ್ಟಿದ ಹಸುಗೂಸಿನಿಂದ ಹಿಡಿದು ಐದು ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ತಪ್ಪದೇ ಎರಡು ಹನಿ ಪೋಲಿಯೊ ಲಸಿಕೆ ಹಾಕಿಸಬೇಕು. ಈ ಮೂಲಕ ಮಾರಕವಾಗಿರುವ ಪೋಲಿಯೊ ವೈರಸ್‌ನಿಂದ ಮಕ್ಕಳನ್ನು ಸಂಪೂರ್ಣವಾಗಿ ರಕ್ಷಿಸಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಸರ್ಕಾರಗಳೊಂದಿಗೆ ಅನೇಕ ಸಂಘ-ಸಂಸ್ಥೆಗಳು ಕೈಜೋಡಿಸಿ ಕಾರ್ಯಕ್ರಮ ಯಶಸ್ವಿಗೊಳಿಸುತ್ತಿರುವುದು ಶ್ಲಾಘನೀಯ ಎಂದು ತಿಳಿಸಿದ ಅವರು, ಮಕ್ಕಳ ಆರೋಗ್ಯದ ಹಿತರಕ್ಷಣೆ ಮಾಡುವ ನಿಟ್ಟಿನಲ್ಲಿ ಇಂದಿನ ದಿನ ಅತ್ಯಂತ ಪ್ರಮುಖವಾದುದಾಗಿದೆ ಎಂದು ಹೇಳಿದರು.



☛ ಉದಯವಾಹಿನಿ ಚಿತ್ರ



ಅನೇಕ ಬಾರಿ ಪೋಷಕರು ನಿರ್ಲಕ್ಷ್ಯ ವಹಿಸುವುದನ್ನು ನಾವು ಕಾಣುತ್ತೇವೆ. ಮಗುವಿಗೆ ಜ್ವರ ಬಂದ ತಕ್ಷಣ ವೈದ್ಯರ ಬಳಿ ಕರೆತರದೆ, ಪರಿಸ್ಥಿತಿ ತೀರಾ ಹದಗೆಟ್ಟ ಕೊನೆಯ ಕ್ಷಣದಲ್ಲಿ ಆಸ್ಪತ್ರೆಗೆ ಧಾವಿಸುತ್ತಾರೆ. ಅಂತಹ ಸಮಯದಲ್ಲಿ ಮಗುವನ್ನು ಗುಣಪಡಿಸುವುದು ವೈದ್ಯರಿಗೂ ಕಷ್ಟವಾಗುತ್ತದೆ. ಹಾಗಾಗಿ, ಯಾವುದೇ ಆರೋಗ್ಯ ಸಮಸ್ಯೆ ಕಂಡುಬಂದ ತಕ್ಷಣ ಸಾರ್ವಜನಿಕರು ತಜ್ಞ ವೈದ್ಯರನ್ನು ಸಂಪರ್ಕಿಸಬೇಕು. ಸರ್ಕಾರದ ಹಂತದಲ್ಲಿ ಉಚಿತವಾಗಿ ಸಿಗುವ ವೈದ್ಯಕೀಯ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಭಾರತವು ಕಳೆದ 15 ವರ್ಷದಿಂದ ಪೋಲಿಯೊ ಮುಕ್ತ ರಾಷ್ಟ್ರವಾಗಿದೆ. ಇದು ಮಹತ್ತರವಾದ ಸಾಧನೆಯಾಗಿದ್ದು, ಪೋಲಿಯೊ ವೈರಸ್ ಇಂದಿಗೂ ಜಗತ್ತಿನಾದ್ಯಂತ ವಿಶ್ವದ ಹಲವು ದೇಶಗಳನ್ನು ಬಾಧಿಸುತ್ತಿದೆ. ಇದರಲ್ಲಿ ಭಾರತದ ನೆರೆಯ ದೇಶಗಳು ಸೇರಿರುವುದು ಭಾರತಕ್ಕೆ ಆತಂಕದ ವಿಚಾರವಾಗಿದೆ.

ಜೂನ್ 28ರಂದು ಪೋಲಿಯೋ ಬೂತ್‌ಗಳಲ್ಲಿ ಪೋಲಿಯೊ ಲಸಿಕೆ ನೀಡಲಾಗುವುದು. ನಂತರದ ಮೂರು ದಿನ ಜೂನ್ 29, 30 ಮತ್ತು ಜುಲೈ 01ರಂದು ಮನೆ ಮನೆ ಭೇಟಿ ನೀಡಿ ಬೂತ್‌ಗಳಲ್ಲಿ ಲಸಿಕೆ ಪಡೆಯದೇ ಇರುವಮಕ್ಕಳಿಗೆ ಪೋಲಿಯೊ ಲಸಿಕೆ ನೀಡಲಾಗುವುದು. ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ಪಲ್ಸ್ ಪೋಲಿಯೋ ಕ್ರಿಯಾ ಯೋಜನೆಯಂತೆ 1085 ಪೋಲಿಯೊ ಬೂತ್‌ಗಳು, 1162 ಲಸಿಕಾ ತಂಡಗಳು, 2324 ಲಸಿಕಾಕಾರರಿಂದ, 235 ಮೇಲ್ವಿಚಾರರನ್ನು ಒಳಗೊಂಡ ಒಟ್ಟು 1,42,851 ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. 0-5 ವರ್ಷ ವಯೋಮಾನದ ಮಕ್ಕಳಿಗೆ ಈ ಹಿಂದೆ ಎಷ್ಟೇ ಬಾರಿ ಪೋಲಿಯೋ ಲಸಿಕೆ ಹಾಕಿಸಿದ್ದರೂ ಸಹ ಮತ್ತೊಮ್ಮೆ ಪೋಲಿಯೊ ಲಸಿಕೆ ಹಾಕಿಸಬೇಕು ಎಂದು ತಿಳಿಸಿದರು.

> ಪಾಕಿಸ್ತಾನ ಹಾಗೂ ಅಫಘಾನಿಸ್ತಾನ ದೇಶಗಳಲ್ಲಿ ಪೋಲಿಯೊ ಪ್ರಕರಣಗಳು ವರದಿಯಾಗಿರುವುದಿಂದ ಈ ದೇಶಗಳ ಮೂಲಕ ಭಾರತಕ್ಕೆ ಪೋಲಿಯೋ ವೈರಸ್ ಹರಡುವ ಸಾಧ್ಯತೆ ಇರುವುದರಿಂದ ಹಾಗೂ ಪೋಲಿಯೊ ಮುಕ್ತ ಭಾರತದ ಸ್ಥಿತಿ ಮುಂದುವರಿಸಿಕೊಂಡು ಹೋಗಲು ಮುಂಜಾಗ್ರತಾ ದೃಷ್ಟಿಯಿಂದ ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮ ಮುಂದುವರೆಸಲಾಗಿದೆ ಎಂದು ಮಾಹಿತಿ ನೀಡಿದರು.
>
> ಜಿಲ್ಲಾ ಆರೋಗ್ಯಾಧಿಕಾರಿ ಡಾ.ಕಾಶೀ

### 'ಮಿಷನ್ ಇಂದ್ರಧನುಷ್' ಯೋಜನೆ

ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮಕ್ಕಳ ಸಮಗ್ರ ಆರೋಗ್ಯಕ್ಕಾಗಿ 'ಮಿಷನ್ ಇಂದ್ರಧನುಷ್' ಯೋಜನೆಯಡಿ ಏಳು ಪ್ರಮುಖ ರೋಗಗಳ ವಿರುದ್ಧ ಲಸಿಕೆಯನ್ನು ನೀಡುತ್ತಿವೆ. ಈ ಎಲ್ಲಾ ಲಸಿಕೆಗಳನ್ನು ಪೋಷಕರು ಕಾಲಕಾಲಕ್ಕೆ ಮಕ್ಕಳಿಗೆ ಕೊಡಿಸುವ ಮೂಲಕ ಅವರನ್ನು ಆರೋಗ್ಯವಂತ ಶಿಶುಗಳನ್ನಾಗಿ, ದೇಶದ ಸತ್ಪ್ರಜೆಗಳನ್ನಾಗಿ ಬೆಳೆಸುವ ಕರ್ತವ್ಯ ಪ್ರತಿಯೊಬ್ಬ ತಾಯಿ-ತಂದೆಯರ ಮೇಲಿದೆ ಎಂದು ಹೇಳಿದರು.

> ಲಸಿಕಾ ಕೇಂದ್ರಕ್ಕೆ ಬಂದು ತಮ್ಮ ಮಕ್ಕಳಿಗೆ ಲಸಿಕೆ ಹಾಕಿಸುವುದರ ಜೊತೆಗೆ, ಪೋಷಕರು ತಮ್ಮ ಸುತ್ತಮುತ್ತಲಿನ ನೆರೆಹೊರೆಯವರಿಗೂ ಹಾಗೂ ಪರಿಚಿತ ಕುಟುಂಬದವರಿಗೂ ಪೋಲಿಯೋ ಲಸಿಕೆಯ ಮಹತ್ವ ತಿಳಿಸಬೇಕು. ಪಲ್ಸ್ ಪೋಲಿಯೊ ಜಾಗೃತಿಯ ರಾಯಭಾರಿಗಳಾಗಿ ಕೆಲಸ ಮಾಡಬೇಕು ಎಂದರು.
>
> -ವಿಧಾನ ಪರಿಷತ್ ಶಾಸಕ ಕೆ.ಎಸ್.ನವೀನ್

# ಪಲ್ಸ್ ಪೋಲಿಯೊ ಕಾರ್ಯಕ್ರಮ ಯಶಸ್ವಿಗೊಳಿಸಲು ಎಲ್ಲರೂ ಕೈಜೋಡಿಸಿ

• **ಉದಯವಾಹಿನಿ ಜಮಖಂಡಿ, :**

ದೇಶವನ್ನು ಪೋಲಿಯೋ ಮುಕ್ತವಾಗಿರಿಸಲು ಪ್ರತಿಯೊಬ್ಬ ನಾಗರಿಕರೂ ತಮ್ಮ ಮಕ್ಕಳಿಗೆ ಕಡ್ಡಾಯವಾಗಿ ಪೋಲಿಯೋ ಲಸಿಕೆ ಹಾಕಿಸಬೇಕು ಎಂದು ಉಪ ವಿಭಾಗಾಧಿಕಾರಿ ಶ್ವೇತಾ ಬೀಡಿಕರ್ ಹೇಳಿದರು.

ನಗರದ ತಾಲ್ಲೂಕು ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಸಭಾಂಗಣದಲ್ಲಿ ಭಾನುವಾರ ನಡೆದ ಅಂತರರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕೋವಿಡ್ ಸಂದರ್ಭದಲ್ಲಿ ಆರೋಗ್ಯ ಇಲಾಖೆ ಹಾಗೂ ವೈದ್ಯಕೀಯ ಕ್ಷೇತ್ರ ದೇಶದ ಜನರ ರಕ್ಷಣೆಗೆ ಶ್ರಮಿಸಿದ ರೀತಿಯೇ, ಪೋಲಿಯೋ ನಿರ್ಮೂಲನೆಯಲ್ಲಿಯೂ ಆರೋಗ್ಯ ಇಲಾಖೆ ಅತ್ಯಂತ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುತ್ತಿದೆ.

ಜಮಖಂಡಿ ಉಪ ವಿಭಾಗದಲ್ಲಿ ಐದು ವರ್ಷದೊಳಗಿನ 12,800 ಮಕ್ಕಳಿಗೆ ಶೇ.100ರಷ್ಟು ಲಸಿಕೆ ನೀಡುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು. ಕಳೆದ ಹಲವು ವರ್ಷಗಳಿಂದ ದೇಶದಲ್ಲಿ ಪೋಲಿಯೋ ಪ್ರಕರಣಗಳು ಕಂಡುಬಂದಿಲ್ಲ. ಇದಕ್ಕೆ ಆಶಾ ಕಾರ್ಯಕರ್ತೆಯರು, ನರ್ಸ್‌ಗಳು, ವೈದ್ಯರು ಹಾಗೂ ಆರೋಗ್ಯ ಸಿಬ್ಬಂದಿಯ ನಿಸ್ವಾರ್ಥ ಸೇವೆಯೇ ಕಾರಣವಾಗಿದೆ. ಸರ್ಕಾರದ ಆರೋಗ್ಯ ಯೋಜನೆಗಳು ಯಶಸ್ವಿಯಾಗಬೇಕಾದರೆ ನಾಗರಿಕರೂ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು ಎಂದು ಹೇಳಿದರು.



☛ ಉದಯವಾಹಿನಿ ಚಿತ್ರ

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಗೈಬುಸಾಬ ಗಲಗಲಿ, ಭಾರತವು 2014ರಲ್ಲಿ ಪೋಲಿಯೋ ಮುಕ್ತ ರಾಷ್ಟ್ರವೆಂದು ಘೋಷಣೆಯಾದರೂ, ಜರ್ಮನಿ, ಅಫ್ಘಾನಿಸ್ತಾನ, ಬಾಂಗ್ಲಾದೇಶ ಸೇರಿದಂತೆ ಕೆಲವು ರಾಷ್ಟ್ರಗಳಲ್ಲಿ ಇನ್ನೂ ಪೋಲಿಯೋ ಪ್ರಕರಣಗಳು ಕಂಡುಬರುತ್ತಿವೆ. ಅಂತರರಾಷ್ಟ್ರೀಯ ಸಂಚಾರ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ದೇಶದಲ್ಲಿ ಪ್ರತಿವರ್ಷ ಪಲ್ಸ್ ಪೋಲಿಯೊ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

# ಚಿಲಗೋಡು ಕರಿಯಮ್ಮ ದೇವಿ ದೇಗುಲ ಗೋಪುರ ನಿರ್ಮಾಣಕ್ಕೆ ಅನುದಾನ

• **ಉದಯವಾಹಿನಿ ಹಗರಿಬೊಮ್ಮನಹಳ್ಳಿ.**

ಚಿಲಗೋಡು ಗ್ರಾಮದ ಆರಾಧ್ಯ ದೈವ ಕರಿಯಮ್ಮ ದೇಗುಲಕ್ಕೆ ಇಲ್ಲಿಯವರೆಗೆ 30 ಲಕ್ಷ ರೂ. ಅನುದಾನ ಕೊಟ್ಟಿದ್ದೇನೆ, ಮುಂದೆಯೂ ಗೋಪುರ ನಿರ್ಮಾಣಕ್ಕೆ ಅನುದಾನ ನೀಡಲಾಗುವುದು ಎಂದು ಶಾಸಕ ಕೆ. ನೇಮಿರಾಜ್ ನಾಯ್ಕ್ ಹೇಳಿದರು.

ತಾಲ್ಲೂಕಿನ ಚಿಲುಗೋಡು ಗ್ರಾಮದ ಹೊರ ವಲಯದಲ್ಲಿ 1.61 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಂಡಿರುವ ಸರ್ಕಾರಿ ಪ್ರೌಢಶಾಲೆಯ ನೂತನ ಕಟ್ಟಡ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಗ್ರಾಮದ ಮುಖ್ಯ ರಸ್ತೆ ಸಂಪೂರ್ಣ ಹಾಳಾಗಿದ್ದು, ಅದಕ್ಕೆ ಸಿಸಿ ರಸ್ತೆ ನಿರ್ಮಾಣಕ್ಕೆ ಶೀಘ್ರದಲ್ಲಿ ಭೂಮಿ ಪೂಜೆ ನೆರವೇರಿಸಲಾಗುವುದು. ಗ್ರಾಮದ ಕಲ್ಲೇಶ್ವರ ದೇವಸ್ಥಾನಕ್ಕೆ ಅನುದಾನ ಕೇಳಿದ್ದೀರಿ ಅದಕ್ಕೂ ಈ ವರ್ಷದಲ್ಲಿ ನೀಡುತ್ತೇನೆ.

ಪಾಲಕರು ತಮ್ಮ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಕಷ್ಟಪಡುತ್ತಿದ್ದಾರೆ. ಸಾಲ ಮಾಡಿ ಒಳ್ಳೆಯ ವಿದ್ಯೆ ಕೊಡಲು ಸಂಕಲ್ಪ ಮಾಡಿದ್ದಾರೆ. ಅದಕ್ಕಾಗಿ ವಿದ್ಯಾರ್ಥಿಗಳು ಚೆನ್ನಾಗಿ ಓದಿ ಅವರ ಹೆಸರನ್ನು ಉಳಿಸುವಂತಾಗಬೇಕು. ಮಹಿಳೆಯರಿಗಾಗಿ 33% ಮೀಸಲಾತಿ ತರಲು ಕೇಂದ್ರ ಸರ್ಕಾರ ಸನ್ನದ್ಧವಾಗಿದೆ. 33% ಜಾರಿಯಾದರೆ ಉದ್ಯೋಗ ರಾಜಕೀಯ ಕ್ಷೇತ್ರದಲ್ಲಿ ಮಹಿಳೆಯರಿಗೆ ಸ್ಥಾನಮಾನ ಸಿಗಲಿದೆ ಎಂದರು. ಹಳ್ಳಿಗಾಡಿನ ವಿದ್ಯಾರ್ಥಿಗಳು ಪ್ರತಿಭಾವಂತರು ಪಟ್ಟಣಕ್ಕಿಂತ ಹಳ್ಳಿಯ ಮಕ್ಕಳಲ್ಲಿರುವ ಸಂಸ್ಕಾರ,ಸಂಸ್ಕೃತಿ ಬೇರೆ ಕಡೆ ಎಲ್ಲಿ ಇರುವುದಿಲ್ಲ. ಎಷ್ಟೇ ಪದವಿ ಪಡೆದರು ಸಂಸ್ಕಾರವಿಲ್ಲ ಎಂದರೆ ತಗೊಂಡು ಏನು ಪ್ರಯೋಜನ ತಂದೆ ತಾಯಿಗಳಿಗೆ ಗುರುಗಳಿಗೆ ಹಿರಿಯರಿಗೆ ಗೌರವ ಕೊಡುವಂತಹ ಗುಣ ಬೆಳೆಸಿಕೊಳ್ಳಬೇಕು ಎಂದರು.



**ಮಹಿಳೆಯರಿಗೆ 33% ಮೀಸಲಾತಿ ತರಲು ಕೇಂದ್ರ ಸರ್ಕಾರ**

# ರಾಜ್ಯದಲ್ಲಿ ಮಳೆ ಕೊರತೆ, ಸರ್ಕಾರ ತಕ್ಷಣವೇ ಬರಗಾಲ ಘೋಷಿಸಲಿ

• **ಉದಯವಾಹಿನಿ ಹುಬ್ಬಳ್ಳಿ:**

ರಾಜ್ಯದಲ್ಲಿ ಮಳೆಯ ಕೊರತೆಯಿಂದ ಬರದ ಪರಿಸ್ಥಿತಿ ನಿರ್ಮಾಣವಾಗುತ್ತಿದ್ದು, ಇನ್ನೊಂದು ವಾರದೊಳಗೆ ಸಮರ್ಪಕ ಮಳೆಯಾಗದಿದ್ದರೆ ಕರ್ನಾಟಕ ಸಂಪೂರ್ಣ ಬರಗಾಲದತ್ತ ಸಾಗುವ ಸಾಧ್ಯತೆಯಿದೆ. ರಾಜ್ಯ ಸರ್ಕಾರ ತಕ್ಷಣವೇ ಬರಗಾಲ ಘೋಷಿಸುವಂತೆ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬೊಮ್ಮಾಯಿ, ರಾಜ್ಯದಲ್ಲಿ ಈವರೆಗೆ ಕೇವಲ ಶೇ.30ರಷ್ಟು ಮಾತ್ರ ಬಿತ್ತನೆಯಾಗಿದ್ದು, ಶೇ.70ರಷ್ಟು ಪ್ರದೇಶಗಳಲ್ಲಿ ಇನ್ನೂ ಬಿತ್ತನೆ ಪ್ರಾರಂಭವಾಗಿಲ್ಲ. ಮಳೆಯ ಕೊರತೆಯಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಮುಂದಿನ ಒಂದು ವಾರದಲ್ಲಿಯೂ ಮಳೆ ಬಾರದಿದ್ದರೆ ಕುಡಿಯುವ ನೀರಿನ ಸಮಸ್ಯೆಯೂ ಗಂಭೀರ ಸ್ವರೂಪ ಪಡೆಯಲಿದೆ ಎಂದು ಹೇಳಿದರು.

ಇಂತಹ ಗಂಭೀರ ಪರಿಸ್ಥಿತಿಯಲ್ಲಿ ಸರ್ಕಾರ ತಕ್ಷಣ ಎಚ್ಚೆತ್ತುಕೊಳ್ಳಬೇಕಿದ್ದು, ಎಲ್ಲ ಜಿಲ್ಲಾಧಿಕಾರಿಗಳ ಸಭೆ ನಡೆಸಿ ವಾಸ್ತವ ಸ್ಥಿತಿಯ ವರದಿ ಪಡೆಯಬೇಕು. ಬರ ಪರಿಹಾರ ಕ್ರಮಗಳನ್ನು ತುರ್ತಾಗಿ ಜಾರಿಗೊಳಿಸಬೇಕು. ಪ್ರಕೃತಿ ವಿಕೋಪ ಪರಿಹಾರ ನಿಧಿಯಲ್ಲಿ ಹಣ ಲಭ್ಯವಿದ್ದು, ಅದನ್ನು ಸಮರ್ಪಕವಾಗಿ ಬಳಕೆ ಮಾಡಿದರೆ ಕೇಂದ್ರ ಸರ್ಕಾರದಿಂದ ಹೆಚ್ಚುವರಿ ನೆರವು ಪಡೆಯಲು ಸಾಧ್ಯವಾಗುತ್ತದೆ ಎಂದು ಹೇಳಿದರು. ರಾಜ್ಯದಲ್ಲಿ ಮಳೆ ಇಲ್ಲದೆ ಕೆರೆಗಳು ಹಾಗೂ ಜಲಾಶಯಗಳಲ್ಲಿನ ನೀರಿನ ಮಟ್ಟ ದಿನದಿಂದ ದಿನಕ್ಕೆ ಕುಸಿಯುತ್ತಿದೆ. ಇಂತಹ ಸಂದರ್ಭದಲ್ಲಿ ರಾಜ್ಯದಲ್ಲಿ ಸಮರ್ಪಕ ಕೃಷಿ ಸಚಿವರೇ ಇಲ್ಲದಿರುವುದು ದುರದೃಷ್ಟಕರ. ಎರಡು ಅಥವಾ ಮೂರು ಜಿಲ್ಲೆಗಳಿಗೆ ಒಬ್ಬ ಸಚಿವರನ್ನು ನೇಮಿಸಿರುವುದರಿಂದ ಯಾವುದೇ ಪ್ರಯೋಜನವಿಲ್ಲ ಎಂದು ಹೇಳಿದರು.

> ಎಲ್ ನೀನೋ ಪರಿಣಾಮ ಹಾಗೂ ಸಂಭವನೀಯ ಬರ ಪರಿಸ್ಥಿತಿಯ ಕುರಿತು ರಾಷ್ಟ್ರೀಯ ವರದಿಗಳು ಈಗಾಗಲೇ ಎಚ್ಚರಿಕೆ ನೀಡಿದ್ದರೂ ಸರ್ಕಾರ ಅದನ್ನು ಗಂಭೀರವಾಗಿ ಪರಿಗಣಿಸಿಲ್ಲ. ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ತಕ್ಷಣ ಬರ ಪರಿಸ್ಥಿತಿ ನಿರ್ವಹಣೆಯತ್ತ ಗಮನ ಹರಿಸಬೇಕು ಎಂದು ಆಗ್ರಹಿಸಿದರು.
>
> -ಸಂಸದ ಬಸವರಾಜ ಬೊಮ್ಮಾಯಿ



# ದುಶ್ಚಟಗಳಿಂದ ದೂರವಿರಿ, ಸದೃಢ ಸಮಾಜ ನಿರ್ಮಿಸಿ

• **ಉದಯವಾಹಿನಿ ಮುಂಡಗೋಡ:**

'ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಆದ್ಯತೆ ನೀಡಬೇಕಿದೆ. ಯುವಪೀಳಿಗೆ ದುಶ್ಚಟಗಳಿಂದ ದೂರವಿದ್ದು, ಸದೃಢ ಸಮಾಜ ನಿರ್ಮಿಸಲು ಕೈ ಜೋಡಿಸಬೇಕು. ಆರೋಗ್ಯವಂತ ಯುವ ಸಮೂಹವೇ ದೇಶದ ಭದ್ರ ಬುನಾದಿಗೆ ಸಹಕಾರಿ' ಎಂದು ಇಶಾ ಅಭಿವೃದ್ಧಿ ಸೇವಾ ಟ್ರಸ್ಟ್‌ನ ನಿರ್ದೇಶಕ ರವಿಚಂದ್ರ ಶಿರಸಿ ಹೇಳಿದರು. ತಾಲ್ಲೂಕಿನ ಚಿಗಳ್ಳಿ ಗ್ರಾಮದ ಸರ್ಕಾರಿ ಪ್ರೌಢ ಶಾಲೆಯಲ್ಲಿ ಇಶಾ ಅಭಿವೃದ್ಧಿ ಸೇವಾ ಟ್ರಸ್ಟ್ ವತಿಯಿಂದ ಈಚೆಗೆ, ವ್ಯಸನ ಮುಕ್ತ ಸಮಾಜ ಕುರಿತು ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದರು. 'ದುಶ್ಚಟಗಳಿಂದಾಗುವ ದುಷ್ಪರಿಣಾಮಗಳ ಕುರಿತು ವಿದ್ಯಾರ್ಥಿ ಜೀವನದಿಂದಲೇ ತಿಳಿದುಕೊಂಡು, ಇತರರಿಗೆ ತಿಳಿವಳಿಕೆ ನೀಡುವ ಕೆಲಸ ಮಾಡಬೇಕು' ಎಂದರು. ಗ್ರಾಮ ಪಂಚಾಯಿತಿ ಅಧ್ಯಕ್ಷೆ ರಹಿಮಾಬಿ ನೂರಅಹ್ಮದ್ ಕಾರ್ಯಕ್ರಮ ಉದ್ಘಾಟಿಸಿ, 'ಸ್ವಸ್ಥ ಸಮಾಜ ನಿರ್ಮಾಣ ಮಾಡಲು, ಶಾಲಾ ಕಾಲೇಜುಗಳಲ್ಲಿ ದುಶ್ಚಟಗಳ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮಗಳು ಹೆಚ್ಚೆಚ್ಚು ನಡೆಯಬೇಕು. ಪಾಲಕರು ಮಕ್ಕಳ ಚಟುವಟಿಕೆಗಳ ಮೇಲೆ ನಿಗಾ ವಹಿಸಬೇಕು' ಎಂದು ತಿಳಿಸಿದರು. ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯ ಎಂ.ಕೆ.ಕುಸೂರು, ಇತ್ತಿಚಿನ ದಿನಗಳಲ್ಲಿ ವಿದ್ಯಾರ್ಥಿಗಳು ದುಶ್ಚಟಗಳಿಗೆ ಬಲಿಯಾಗುತ್ತಿರುವ ಘಟನೆಗಳು ಹೆಚ್ಚು ನಡೆಯುತ್ತಿವೆ ಎಂದು ಕಳವಳ ವ್ಯಕ್ತಪಡಿಸಿದರು. ಮುಖ್ಯ ಶಿಕ್ಷಕಿ ನಯನ ಭಂಡಾರಿ ಇದ್ದರು.

# ಪಲ್ಸ್ ಪೋಲಿಯೋ ಮಹಾ ಅಭಿಯಾನ: ತಹಶೀಲ್ದಾರ್ ಚಾಲನೆ

• **ಉದಯವಾಹಿನಿ ಮುದ್ದೇಬಿಹಾಳ:**

ಮಕ್ಕಳ ಆರೋಗ್ಯವೇ ದೇಶದ ಸಂಪತ್ತು. ಪೋಲಿಯೋ ಮುಕ್ತ ಸಮಾಜ ನಿರ್ಮಾಣಕ್ಕಾಗಿ ಪೋಷಕರು ಜಾಗೃತರಾಗಿ 5 ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ತಪ್ಪದೇ ಲಸಿಕೆ ಹಾಕಿಸಬೇಕು ಎಂದು ತಹಶೀಲ್ದಾರ್ ಶ್ರೀಮತಿ ಕೀರ್ತಿ ಚಾಲಕ್ ಕರೆ ನೀಡಿದರು.

ಪಟ್ಟಣದಲ್ಲಿ ಹಮ್ಮಿಕೊಳ್ಳಲಾಗಿದ್ದ 'ರಾಷ್ಟ್ರೀಯ ಪಲ್ಸ್ ಪೋಲಿಯೋ' ಲಸಿಕಾ ಮಹಾ ಅಭಿಯಾನಕ್ಕೆ ಐದು ವರ್ಷದೊಳಗಿನ ಪುಟ್ಟ ಕಂದಮ್ಮಗಳಿಗೆ ಪೋಲಿಯೋ ಹನಿಗಳನ್ನು ಹಾಕುವುದರ ಮೂಲಕ ಅವರು ಅಧಿಕೃತವಾಗಿ ಚಾಲನೆ ನೀಡಿ ಮಾತನಾಡಿದರು ಪಟ್ಟಣದಲ್ಲಿ ಒಟ್ಟು 4,846 ಮಕ್ಕಳಿಗೆ ಪೋಲಿಯೋ ಲಸಿಕೆ ನೀಡುವ ಮಹತ್ತರ ಗುರಿಯನ್ನು ಹಾಕಿಕೊಳ್ಳಲಾಗಿತ್ತು.

ಆರೋಗ್ಯ ಇಲಾಖೆಯ ವ್ಯವಸ್ಥಿತ ಸಿದ್ಧತೆ ಹಾಗೂ ಸಾರ್ವಜನಿಕರ ಉತ್ತಮ ಸ್ಪಂದನೆಯಿಂದಾಗಿ, ಅಭಿಯಾನದ ಮೊದಲ ದಿನವೇ ಬರೋಬ್ಬರಿ 4,464 ಮಕ್ಕಳಿಗೆ ಲಸಿಕೆ ನೀಡುವಲ್ಲಿ ಇಲಾಖೆ ಯಶಸ್ವಿಯಾಗಿದೆ. ಇನ್ನುಳಿದ ಮಕ್ಕಳಿಗೂ ಶೀಘ್ರದಲ್ಲೇ ಮನೆ ಮನೆ ಭೇಟಿ ನೀಡಿ ಲಸಿಕೆ ತಲುಪಿಸಲಾಗುವುದು ಎಂದು ತಾಲ್ಲೂಕು ಆರೋಗ್ಯ ಅಧಿಕಾರಿಗಳು ಪತ್ರಿಕೆಗೆ ಮಾಹಿತಿ ನೀಡಿದ್ದಾರೆ.

ಕಾರ್ಯಕ್ರಮದ ಯಶಸ್ಸಿಗೆ ತಾಲೂಕಿನ ಪ್ರಮುಖ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಸಾಕ್ಷಿಯಾದರು.

ವೇದಿಕೆಯ ಮೇಲೆ ಹಾಗೂ ಲಸಿಕಾ ಕೇಂದ್ರದಲ್ಲಿ ತಾಲ್ಲೂಕು ಆರೋಗ್ಯ ಅಧಿಕಾರಿಗಳಾದ ಡಾ. ಸತೀಶ್ ಭಗವಾನ್ ತಿವಾರಿ, ತಾಲ್ಲೂಕು ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿಗಳಾದ ಡಾ. ರಂಗನಾಥ್ ವೈದ್ಯ ಆರೋಗ್ಯ ರಕ್ಷಾ ಸಮಿತಿಯ ಅಧ್ಯಕ್ಷ ವಿಜಯಕುಮಾರ ಗೂಳಿಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ ಮುಂತಾದವರು ಉಪಸ್ಥಿತರಿದ್ದರು.



☛ ಉದಯವಾಹಿನಿ ಚಿತ್ರ

# 5ವರ್ಷದ ಒಳಗಿನ ಮಕ್ಕಳಿಗೆ ಎರಡು ಹನಿ ಪಲ್ಸ್ ಪೋಲಿಯೋ ಹಾಕಿಸಿಕೊಳ್ಳಿ


• **ಉದಯವಾಹಿನಿ,ಚಿಂಚೋಳಿ.**

ತಾಲ್ಲೂಕಿನ 05ವರ್ಷದ ಒಳಗಿನ ಎಲ್ಲಾ ಮಕ್ಕಳಿಗೆ ತಪ್ಪದೆ ಸಮೀಪದ ಲಸೀಕಾ ಕೇಂದ್ರದಲ್ಲಿ ಎರಡು ಹನಿ ಪಲ್ಸ್ ಪೋಲಿಯೋ ಜೂ.28ರವಿವಾರದಿಂದ ಜು.01ರವರೆಗೆ ಹಾಕಿಸಿಕೊಳ್ಳಬೇಕು ಎಂದು ಟಿಹೆಚ್‌ಓ ಡಾ.ಮಹ್ಮದ್ ಗಫಾರ್ ಕರೆ ನೀಡಿದರು.

ಪಟ್ಟಣದ ಅಂಬೇಡ್ಕರ್ ವೃತ್ತದ ಸಮೀಪ ಮಕ್ಕಳಿಗೆ ಪಲ್ಸ್ ಪೋಲಿಯೋ ಹಾಕಿ ಮಾತನಾಡಿದ ಅವರು, ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಅಂಗವಾಗಿ ಆರೋಗ್ಯ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಪೋಲಿಯೋ ಕಾರ್ಯಕ್ರಮದಲ್ಲಿ ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆಯಲ್ಲಿ,ಸಮೂದಾಯ ಆರೋಗ್ಯ ಕೇಂದ್ರದಲ್ಲಿ,ಅಂಗನವಾಡಿ ಕೇಂದ್ರ,ಪ್ರಾಥಮಿಕ ಆರೋಗ್ಯ ಕೇಂದ್ರ ಸೇರಿದಂತೆ ಬಸ್ ನಿಲ್ದಾಣ, ಗ್ರಾಮ,ನಗರದ ವೃತ್ತಗಳಲ್ಲಿ ನಮ್ಮ ಆರೋಗ್ಯದ ಸಿಬ್ಬಂದಿ,ಅಂಗನವಾಡಿ ಕಾರ್ಯಕರ್ತೆರು ಸೇರಿದಂತೆ ಪಲ್ಸ್ ಪೋಲಿಯೋ ಹನಿ ಹಾಕಲಾಗುತ್ತಿದೆ.

ತಾಲ್ಲೂಕಿನಲ್ಲಿ ಐದು ವರ್ಷದ ಒಳಗಿನ 31,4,88ಮಕ್ಕಳಿದ್ದು ಈಗಾಗಲೇ ಗುರುತಿಸಲಾಗಿದೆ ಎಲ್ಲಾ ಮಕ್ಕಳಿಗೆ ಪಲ್ಸ್ ಪೋಲಿಯೋ ಹನಿ ಹಾಕಲಾಗುವುದು,164ಲಸೀಕಾ ಕೇಂದ್ರಗಳು,164ಮನೆ ಭೇಟಿ ತಂಡ ಮಾಡಲಾಗಿದೆ,ಟ್ರಾನ್ ಜಿಟ್ ಲಸಿಕಾ ತಂಡ 16 ಮಾಡಿದ್ದು,ಸಂಚಾರಿ ಲಸಿಕಾ ತಂಡ 2ಮಾಡಲಾಗಿದ್ದು,ಒಟ್ಟು ತಂಡ 182 ಮಾಡಲಾಗಿದೆ,ಮೇಲ್ವಿಚಾರಕರಾಗಿ 36ಜನರಿಗೆ ನೇಮಿಸಿದ್ದು,ಲಸಿಕಾ ಸಿಬ್ಬಂದಿ 364ಜನರೀಗೆ ನೇಮಕ ಮಾಡಲಾಗಿದೆ ಸಾರ್ವಜನಿಕರು ತಂಡದೊಂದಿಗೆ ಸಹಕರಿಸಿ ಪಲ್ಸ್ ಪೋಲಿಯೋದ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಹಿರಿಯ ಮುಖಂಡ ಗೋಪಾಲರಾವ ಕಟ್ಟಿಮನಿ,ನರ್ಸಿಂಗ್ ಅಧಿಕಾರಿ ರವಿ,ಸಿಎಚ್‌ಓ ಪೂಜಾ,ತಾರಾನಾಯಕ ಇದ್ದರು.



☛ ಉದಯವಾಹಿನಿ ಚಿತ್ರ

# ಈಶ್ವರ ಖಂಡ್ರೆ, ಮೋದಿ ಸರ್ಕಾರದ ಕ್ಷಮೆ ಕೇಳಬೇಕು: ಭಗವಂತ ಖೂಬಾ

## ರೈತರ ಮೇಲಿನ ಕಾಳಜಿ ಹಾಗೂ ಯೋಜನೆಗಳ ಬಗ್ಗೆ ಇರುವ ಭರವಸೆ ಮತ್ತಷ್ಟು ಹೆಚ್ಚು ಮಾಡಿದೆ

• **ಉದಯವಾಹಿನಿ ಬೀದರ**

ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ 2025-26ನೇ ಸಾಲಿನಲ್ಲಿ 246.89 ಕೋಟಿ ಪರಿಹಾರ ಮಂಜೂರಾಗಿ , ರೂ. 155 ಕೋಟಿ ಈಗಾಗಲೆ ರೈತರ ಖಾತೆಗೆ ಜಮೆಯಾಗಿದ್ದು ಉಳಿದ 91 ಕೊಟಿ ಪರಿಹಾರ ಮುಂದಿನ ಕೆಲವೆ ದಿನಗಳಲ್ಲಿ ಜಮೆಯಾಗಲಿದೆ

**1 : ನಾಗರಿಕರ ರಕ್ಷಣೆ ಮತ್ತು ಅಭಿವೃದ್ಧಿ**

**2 : ಗೊಲ್ಮಾಲ್ ಯೋಜನೆ, ಫ್ರಾಡ್ ಯೋಜನೆ**

**3 : ಸರಿಯಾಗಿ ಬಳಸಿಕೊಳ್ಳದೆ, ದುರಾಡಳಿತ**

ಒಟ್ಟಿನಲ್ಲಿ 246 ಕೋಟಿ ಪರಿಹಾರ ಬಂದಿರುವುದು ಅತ್ಯಂತ ಸಂತಸದ ಸುದ್ದಿ ಮತ್ತು ನಮ್ಮ ಮೋದಿ ಸರ್ಕಾರದ ಬದ್ದತೆ, ರೈತರ ಮೇಲಿನ ಕಾಳಜಿ ಹಾಗೂ ಯೋಜನೆಗಳ ಬಗ್ಗೆ ಇರುವ ಭರವಸೆ ಮತ್ತಷ್ಟು ಹೆಚ್ಚು ಮಾಡಿದೆ ಎಂದು ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ಸಂತೊಷ ವ್ಯಕ್ತಪಡಿಸಿದ್ದಾರೆ.

ಆದರೆ ಕಳೆದ 10 ವರ್ಷಗಳಿಂದ ಈ ಯೋಜನೆ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆಯವರು, ಇದನ್ನು ಬಿಜೆಪಿ ಪ್ರಾಯೋಜಿತ ಗೊಲ್ಮಾಲ್ ಯೋಜನೆ, ಫ್ರಾಡ್ ಯೋಜನೆ ಎಂದು ಉಲ್ಲೇಖಿಸಿ ನಿರಂತರವಾಗಿ ರೈತರಲ್ಲಿ ಅಪಪ್ರಚಾರ ಮಾಡುತ್ತಾ, ರೈತರಿಗೆ ಈ ಯೋಜನೆಯಿಂದ ದೂರ ಇರಿಸುವ ಪ್ರಯತ್ನ ಮಾಡಿದರು, ಖಂಡ್ರೆಯವರಿಗೆ ಸಿಕ್ಕ ಅಧಿಕಾರವನ್ನು ಸರಿಯಾಗಿ ಬಳಸಿಕೊಳ್ಳದೆ, ದುರಾಡಳಿತದ ಸರದಾರನಾಗಿ , ತನ್ನ ವಿಫಲತೆಗಳು ಮುಚ್ಚಿಕೊಳ್ಳುವ ಉದ್ದೇಶದಿಂದ ಮೇಲಿಂದ ಮೇಲೆ ಈ ಯೋಜನೆ ಬಗ್ಗೆ ಸುಳ್ಳು ಹೇಳಿಕೊಂಡು ಬರುತ್ತಿದ್ದರು, ಈವಾಗ ರೂ. 246 ಕೋಟಿ ಪರಿಹಾರ ನಮ್ಮ ಮೋದಿ ಸರ್ಕಾರದ ಯೋಜನೆಯಡಿ ವಿಮೆ ಕಂಪನಿಯಿಂದ ಜಮೆಯಾಗಿದೆ, ಆದರೆ ಈಶ್ವರ ಖಂಡ್ರೆಯವರಿಗೆ ಯಾವೂದೇ ನಾಚಿಕೆಯಿಲ್ಲದೆ ತನ್ನ ಸಾಧನೆ ಎಂಬಂತೆ ಬಿಂಬಿಸಿಕೊಳ್ಳಲು ಹೊರಟಿದ್ದಾರೆ,

ಸ್ವಲ್ಪವಾದರು ರೈತರ ಬಗ್ಗೆ ಖಂಡ್ರೆಯವರಿಗೆ ಕಾಳಜಿಯಿದ್ದರೆ ಈ ಯೊಜನೆ ಬಗ್ಗೆ ಸುಳ್ಳು ಹೇಳಿದ್ದಕ್ಕಾಗಿ ಖಂಡ್ರೆಯವರು ಮೋದಿ ಸರ್ಕಾರಕ್ಕೆ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದ್ದಾರೆ.




☛ ಉದಯವಾಹಿನಿ ಚಿತ್ರ

> ಫಸಲ್ ಬಿಮಾ ಯೋಜನೆಯಿಂದ ನಮ್ಮ ಜಿಲ್ಲೆಯ ರೈತರು ಇಷ್ಟೊಂದು ಪರಿಹಾರ ಪಡೆದುಕೊಂಡು ಅವರ ನಷ್ಟ ಸರಿದೂಗಿಸಿಕೊಳ್ಳುತ್ತಿದ್ದರು ಸಹ ಈ ಯೋಜನೆಯನ್ನು ಗೋಲ್ಮಾಲ್ ಯೋಜನೆ, ಫ್ರಾಡ್ ಯೋಜನೆ ಎಂದಿದ್ದ ಈಶ್ವರ ಖಂಡ್ರೆ ಅವರು ನಿಜವಾದ ಫ್ರಾಡ್ ಯಾರು ಎಂಬುದು ಸ್ವತಃ ಅವರೇ ಆತ್ಮಾವಲೋಕನ ಮಾಡಿಕೊಳ್ಳಬೇಕೆಂದು ತಿಳಿಸಿದ್ದಾರೆ.
>
> -ಮಾಜಿ ಸಚಿವ ಭಗವಂತ ಖೂಬಾ



### ಸಂಪೂರ್ಣ ಶ್ರೇಯ ಜಿಲ್ಲೆಯ ರೈತರಿಗೆ ಮೋದಿಜೀಗೆ ಸಲ್ಲುತ್ತದೆ

ನಾನು ನನ್ನ ಅವಧಿಯಲ್ಲಿ ರೈತರಿಗೆ ಅಷ್ಟೊಂದು ಜಾಗೃತರಾಗಿ ಮಾಡಿದ್ದೇನೆ, ಇದರ ಸಂಪೂರ್ಣ ಶ್ರೇಯ ಜಿಲ್ಲೆಯ ರೈತರಿಗೆ ಮತ್ತು ದೇಶದ ಪ್ರಧಾನಿ ಸನ್ಮಾನ್ಯ ಶ್ರೀ ನರೇಂದ್ರ ಮೋದಿಜೀಯವರಿಗೆ ಸಲ್ಲುತ್ತದೆ ಮತ್ತು ದೇಶದ ಪ್ರಧಾನಿ ಸನ್ಮಾನ್ಯ ಶ್ರೀ ನರೇಂದ್ರ ಮೋದಿಜೀಯವರಿಗೆ ಮತ್ತು ಜಿಲ್ಲೆಯ ರೈತರಿಗೆ ಭಗವಂತ ಖೂಬಾ ಧನ್ಯವಾದ ಮತ್ತು ಅಭಿನಂದನೆಗಳು ತಿಳಿಸಿದ್ದಾರೆ.

ಮೋದಿ ಸರ್ಕಾರದ ಪ್ರತಿಯೊಂದು ಯೋಜನೆ ದೇಶದ ಪ್ರತಿಯೊಬ್ಬ ನಾಗರಿಕರ ರಕ್ಷಣೆ ಮತ್ತು ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ರೂಪಿಸಲಾಗುತ್ತದೆ, ಅದರಂತೆ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯೂ ಒಂದಾಗಿದೆ, ಕಳೆದ 10 ವರ್ಷಗಳಲ್ಲಿ ಒಟ್ಟು ರೂ 800 ಕೋಟಿಗೂ ಅಧಿಕ ಪರಿಹಾರ ನಮ್ಮ ರೈತರಿಗೆ ಸಿಕ್ಕಿದ್ದು ನಿಜಕ್ಕೂ ಹೆಮ್ಮೆ ಪಡುವ ಸಂಗತಿಯಾಗಿದೆ, ನನ್ನ ಅವಧಿಯಲ್ಲಿ ನಾನು ಈ ಯೋಜನೆ ಬಗ್ಗೆ ಜನರಿಗೆ ಅರಿವು ಮೂಡಿಸಿರುವ ಕಾರಣ, ರೈತರು ಇಂದು ಜಾಗೃತರಾಗಿದ್ದಾರೆ, ಈಶ್ವರ ಖಂಡ್ರೆಯವರ ನಿರಂತರ ಅಪಪ್ರಚಾರದ ಮಧ್ಯೆಯೂ ರೈತರು ನಿರಂತರವಾಗಿ ವಿಮೆ ಭರಿಸುತ್ತಿದ್ದಾರೆ ಜೊತೆಗೆ ಪರಿಹಾರವು ಪಡೆದುಕೊಳ್ಳುತ್ತಿದ್ದಾರೆ, ಪರಿಹಾರ ಬರದೆ ಇದ್ದರೆ ರೈತರು ನೇರವಾಗಿ ವಿಮಾ ಕಂಪನಿಗೆ ಪ್ರಶ್ನೆ ಮಾಡುತ್ತಿದ್ದಾರೆ,

# ಮಿನಿ ನ್ಯೂಸ್

## ಕಸ ವಿಲೇವಾರಿ ವಾಹನ-ಬೈಕ್ ನಡುವೆ ಅಪಘಾತ

• **ಉದಯವಾಹಿನಿ ಜಮಖಂಡಿ, :**

ನಗರದ ಹೊರವಲಯದ ಜಂಬಗಿ ರಸ್ತೆಯ ವಿಶ್ವಾರಾಧ್ಯ ಶಾಲೆ ಸಮೀಪ ನಗರಸಭೆಯ ಕಸ ವಿಲೇವಾರಿ ಟಾಟಾ ಎಸ್ ವಾಹನ ಮತ್ತು ಬೈಕ್ ನಡುವೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಓರ್ವ ಬೈಕ್ ಸವಾರನ ಸ್ಥಿತಿ ಚಿಂತಾಜನಕವಾಗಿದ್ದು, ಮತ್ತೋರ್ವರಿಗೆ ಸಣ್ಣಪುಟ್ಟ ಗಾಯಗಳಾಗಿರುವ ಘಟನೆ ನಡೆದಿದೆ.

ಅಪಘಾತದಲ್ಲಿ ಗಾಯಗೊಂಡ ಬೈಕ್ ಸವಾರರನ್ನು ತಕ್ಷಣ ಜಮಖಂಡಿ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಪ್ರಾಥಮಿಕ ಚಿಕಿತ್ಸೆ ನೀಡಲಾಗಿದೆ. ಗಂಭೀರವಾಗಿ ಗಾಯಗೊಂಡಿರುವ ಕಂಕಣವಾಡಿ ಗ್ರಾಮದ 33 ವರ್ಷದ ಸೋಮನಾಥ ಹಿರೇಮಠ ಅವರನ್ನು ಹೆಚ್ಚಿನ ಚಿಕಿತ್ಸೆಗೆ ವಿಜಯಪುರದ ಖಾಸಗಿ ಆಸ್ಪತ್ರೆಗೆ ರವಾನಿಸಲಾಗಿದೆ.

ಮತ್ತೋರ್ವ ಬೈಕ್ ಸವಾರ ಮುತ್ತೂರು ಗ್ರಾಮದ ಸುಭಾಷ್ ಕೊಗಟನೂರ ಅವರಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ತಿಳಿದುಬಂದಿದೆ. ನಗರಸಭೆಯ ಕಸ ವಿಲೇವಾರಿ ವಾಹನದ ಚಾಲಕನನ್ನು ಬಸವರಾಜ ನವಣಿ ಎಂದು ಗುರುತಿಸಲಾಗಿದ್ದು, ವಾಹನದಲ್ಲಿದ್ದ ಮತ್ತೋರ್ವ ಸಿಬ್ಬಂದಿಗೂ ಸಣ್ಣಪುಟ್ಟ ಗಾಯಗಳಾಗಿವೆ. ಅವರನ್ನು ಜಮಖಂಡಿ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ ಘಟನಾ ಸ್ಥಳಕ್ಕೆ ಪಿ.ಎಸ್.ಐ. ಗಂಗಾಧರ ಪೂಜೇರಿ ನೇತೃತ್ವದ ಜಮಖಂಡಿ ಗ್ರಾಮೀಣ ಪೊಲೀಸ್ ಠಾಣೆಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಪಘಾತಕ್ಕೆ ನಿಖರ ಕಾರಣ ಇನ್ನೂ ತಿಳಿದು ಬಂದಿಲ್ಲ. ಈ ಕುರಿತು ಜಮಖಂಡಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗುವ ಸಾಧ್ಯತೆ ಇದ್ದು, ಹೆಚ್ಚಿನ ಮಾಹಿತಿ ಪೊಲೀಸ್ ತನಿಖೆಯಿಂದ ತಿಳಿದು ಬರಬೇಕಾಗಿದೆ.

## ಸಮಾಜಕ್ಕಾಗಿ ಕಾರ್ಯನಿರ್ವಹಿಸಲು ಸದಾ ಸಿದ್ಧ

• **ಉದಯವಾಹಿನಿ ಭಾಲ್ಕಿ:**

ಮಹೇಶ್ವರಿ ಸಮಾಜದ ಏಳಿಗೆಗಾಗಿ ನಾನು 24/7 ಕಾರ್ಯನಿರ್ವಹಿಸಲು ಸದಾ ಸಿದ್ಧನಿದ್ದೇನೆ ಎಂದು ಬೀದರ-ಕಲಬುರ್ಗಿ ಜಿಲ್ಲೆಯ ಮಹೇಶ್ವರಿ ಸಮಾಜದ ನೂತನ ಅಧ್ಯಕ್ಷ ರಾಜಗೋಪಾಲ ಬಿಯಾಣಿ ತಮ್ಮ ಮನದಾಳದ ಮಾತು ಹೊರಹಾಕಿದರು.ಭಾಲ್ಕಿ ಪಟ್ಟಣದಲ್ಲಿ ಬೀದರ-ಕಲಬುರ್ಗಿ ಜಿಲ್ಲೆಯ ಮಹೇಶ್ವರಿ ಸಮಾಜದ ನೂತನ ಅಧ್ಯಕ್ಷರಾಗಿ ಅಭಿಮಾನಿ ಬಳಗದವರಿಂದ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಸಮಾಜದ ಹಿರಿಯ ಮುಖಂಡರು ನನ್ನ ಮೇಲೆ ನಂಬಿಕೆ,ಶ್ರದ್ಧೆ,ವಿಶ್ವಾಸ ,ಅಭಿಮಾನವಿಟ್ಟು ನನ್ನನ್ನು ಎರಡು ಜಿಲ್ಲೆಯ ಹೊಣೆಗಾರಿಕೆ ಕೊಟ್ಟಿದ್ದಾರೆ. ಅದನ್ನು ಸಮರ್ಥವಾಗಿ ನಿಭಾಯಿಸಿ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಮೇಲೆತ್ತುವ ಕಾರ್ಯ ಮಾಡುತ್ತೇನೆ.ಮಹೇಶ್ವರಿ ಸಮಾಜ (ಮಾರವಾಡಿ ) ಅತ್ಯಂತ ಪ್ರಾಚೀನ ಕಾಲದಿಂದ ಪ್ರಮುಖ ವ್ಯಾಪಾರಸ್ಥ ,ವರ್ತಕರ ಸಮಾಜವಾಗಿದೆ.ಇವರ ಮುಖ್ಯ ಕಸಬು ವ್ಯಾಪಾರವಾಗಿದ್ದು,ಭಾರತದಲ್ಲಿ ಅತಿ ಹೆಚ್ಚಿನ ಸಂಖ್ಯೆ ರಾಜಸ್ಥಾನದಲ್ಲಿದೆ.ನಮ್ಮ ಸಮಾಜದವರು ಪ್ರಾಮಾಣಿಕತೆಯಿಂದ ವ್ಯಾಪಾರ ನಡೆಸಿ ಎಲ್ಲರ ಮನ ಗೆಲ್ಲುತ್ತಿರುವುದು ಅಭಿಮಾನದ ಸಂಗತಿಯಾಗಿದೆ.ಸಮಾಜ ಸುಧಾರಿಸಬೇಕಾದರೆ ಎಲ್ಲರೂ ಒಗ್ಗಟ್ಟಿನಿಂದ ಜೀವನ ನಡೆಸಬೇಕಾಗುತ್ತದೆ.ಮಹೇಶ್ವರಿ ಸಮಾಜದಲ್ಲಿ ಜನಪ್ರತಿನಿಧಿಗಳ ಕೊರತೆಯಿದೆ ಎಂದು ಕಳವಳ ವ್ಯಕ್ತಪಡಿಸಿದರು.

## ಪಿತ್ರಾರ್ಜಿತ ಜಮೀನಿಗೆ ಅಕ್ರಮ ಪ್ರವೇಶ

• **ಉದಯವಾಹಿನಿ ಯಾದಗಿರಿ:**

ಗುರುಮಠಕಲ್ ತಾಲ್ಲೂಕಿನ ಮಗ್ಗಂಪೂರ ಗ್ರಾಮದ ವ್ಯಾಪ್ತಿಯಲ್ಲಿ ಅಕ್ರಮ ಮರಳು ಗಣಿಗಾರಿಕೆ ಹಾಗೂ ಸಾಗಣೆ ನಡೆದಿದೆ ಎಂಬ ಗಂಭೀರ ಆರೋಪ ಕೇಳಿಬಂದಿದ್ದು, ಪಿತ್ರಾರ್ಜಿತ ಜಮೀನಿಗೆ ಅಕ್ರಮವಾಗಿ ಪ್ರವೇಶಿಸಿ ಅಪಾರ ಪ್ರಮಾಣದ ಮರಳು ತೆಗೆದುಕೊಂಡು ಹೋಗಲಾಗಿದೆ ಎಂದು ಜಮೀನು ಮಾಲೀಕ ಶಿವಪ್ಪ ತಂದೆ ಕಾಶಪ್ಪ ಬಟ್ಟೆಗೇರಿ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ದೂರು ಸಲ್ಲಿಸಿದ್ದಾರೆ.

ದೂರಿನ ಪ್ರಕಾರ, ಗುರುಮಠಕಲ್ ತಾಲ್ಲೂಕಿನ ಪಸಪೂಲ್ ಗ್ರಾಮದ ಸೀಮೆ ವ್ಯಾಪ್ತಿಯಲ್ಲಿರುವ ಸರ್ವೆ ನಂ.128ರ ಜಮೀನು ತಮ್ಮ ಕುಟುಂಬದ ಪಿತ್ರಾರ್ಜಿತ ಆಸ್ತಿಯಾಗಿದ್ದು, ಕಾನೂನುಬದ್ಧ ಸ್ವಾಧೀನ ಹಾಗೂ ಮಾಲೀಕತ್ವ ತಮ್ಮದಾಗಿದೆ. ಆದರೂ ಯಾವುದೇ ಅನುಮತಿ ಪಡೆಯದೆ ಕೆಲವರು ಏಕಾಏಕಿ ಜಮೀನಿಗೆ ಪ್ರವೇಶಿಸಿ ಅಕ್ರಮವಾಗಿ ಮರಳು ತೆಗೆದು ಸಾಗಣೆ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ. ಜೂನ್ 22 ಮತ್ತು ಜೂನ್ 26ರಂದು ಟ್ರಾಕ್ಟರ್‌ಗಳು, ಹಿಟಾಚಿ ಹಾಗೂ ಜೆಸಿಬಿ ಯಂತ್ರಗಳ ಸಹಾಯದಿಂದ ಬೃಹತ್ ಪ್ರಮಾಣದಲ್ಲಿ ಮರಳು ಸಾಗಣೆ ಮಾಡಲಾಗಿದೆ. ಈ ವೇಳೆ ಪ್ರಶ್ನಿಸಿದಾಗ ಬೆದರಿಕೆ ಹಾಕಿ, ದಬ್ಬಾಳಿಕೆ ನಡೆಸಿ, ತಮ್ಮ ಪ್ರಭಾವ ಬಳಸಿ ಮರಳು ಸಾಗಣೆ ಮುಂದುವರಿಸಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಈ ಅಕ್ರಮ ಚಟುವಟಿಕೆಯ ಹಿಂದೆ ಬಿಡ್ಡ ಕಮ್ ಬ್ಯಾರೇಜ್ ಕಾಮಗಾರಿಯ ಪ್ರಥಮ ದರ್ಜೆ ಗುತ್ತಿಗೆದಾರರಾದ ಗುರುರಾಜ ಕಣ್ಣಿ ಹಾಗೂ ಉಪಗುತ್ತಿಗೆದಾರ ಶರಣಗೌಡ ಅವರ ಕೈವಾಡವಿದೆ ಎಂದು ಆರೋಪಿಸಲಾಗಿದ್ದು, ಕಾಮಗಾರಿಗೆ ಬಳಸಿಕೊಳ್ಳುವ ಉದ್ದೇಶದಿಂದ ಸುಮಾರು 500 ಟಿಪ್ಪರ್‌ಗೂ ಅಧಿಕ ಮರಳನ್ನು ತಮ್ಮ ಜಮೀನಿನಿಂದ ಅಕ್ರಮವಾಗಿ ತೆಗೆದುಕೊಂಡು ಹೋಗಲಾಗಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

## ಮೊಹರಂ ಆಚರಣೆ ವೇಳೆ ಅಗ್ನಿ ಕುಂಡಕ್ಕೆ ಬಿದ್ದು ವ್ಯಕ್ತಿ ಸಾವು

• **ಉದಯವಾಹಿನಿ ಬಳ್ಳಾರಿ:**

ಮೊಹರಂ ಆಚರಣೆ ವೇಳೆ ಮತ್ತೊಂದು ದುರಂತ ಸಂಭವಿಸಿದ್ದು, ವ್ಯಕ್ತಿಯೋರ್ವ ಅಗ್ನಿಕುಂಡಕ್ಕೆ ಬಿದ್ದು ಸಾವನ್ನಪ್ಪಿರುವ ಘಟನೆ ಬಳ್ಳಾರಿಯಲ್ಲಿ ವರದಿಯಾಗಿದೆ. ಬಳ್ಳಾರಿ ಜಿಲ್ಲೆ ಕುರುಗೋಡು ತಾಲೂಕಿನ ಕ್ಯಾದಿಗೆಹಾಳ್‌ನಲ್ಲಿ ಮುಸ್ಲಿಮರ ಹಬ್ಬ ಮೊಹರಂ ಆಚರಣೆಗಾಗಿ ನಿರ್ಮಿಸಿದ್ದ ಅಲಾಯಿ ಕುಣಿಗೆ ಬಿದ್ದು ಯುವಕನೊಬ್ಬ ಮೃತಪಟ್ಟ ಘಟನೆ ಸಂಭವಿಸಿದೆ. ಮೊಹರಂ ಆಚರಣೆಗಾಗಿ ಪೀರಲು ದೇವರ ಪ್ರತಿಷ್ಠಾಪಿಸಿ ಅಲಾಯಿ ಕುಣಿ (ಬೆಂಕಿ ಉರಿಸುವ ಹೊಂಡ) ತೋಡಿ ಬೆಂಕಿ ಹಾಕಲಾಗಿತ್ತು.

ಶುಕ್ರವಾರ ಹಬ್ಬದ ಆಚರಣೆ ಸಂದರ್ಭ ಈ ಕುಣಿಯ ಬೆಂಕಿಗೆ ಬಿದ್ದು ಮಡಿವಾಳ ದೇವರಾಜ್ (28) ಗಂಭೀರವಾಗಿ ಗಾಯಗೊಂಡಿದ್ದ. ತಕ್ಷಣ ಆತನನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಆದರೆ ಚಿಕಿತ್ಸೆ ಫಲಿಸದೆ ಶನಿವಾರ ಮೃತಪಟ್ಟಿದ್ದಾನೆ. ಮೃತನಿಗೆ ತಂದೆ ತಾಯಿ, ಪತ್ನಿ ಇದ್ದಾರೆ. ಮತ್ತೊಂದು ದುರಂತ ಸಂಭವಿಸಿದ್ದು, ವ್ಯಕ್ತಿಯೋರ್ವ ಅಗ್ನಿಕುಂಡಕ್ಕೆ ಬಿದ್ದು ಸಾವನ್ನಪ್ಪಿರುವ ಘಟನೆ ಬಳ್ಳಾರಿಯಲ್ಲಿ ವರದಿಯಾಗಿದೆ.



☛ ಉದಯವಾಹಿನಿ ಚಿತ್ರ

